ವಿಜಯಪುರ | ಸಂಪುಟ 02 | ಸಂಚಿಕೆ 89 | ಪುಟ 4 | ₹ 3.00

https://udayarashminews.com udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಶನಿವಾರ, ಮೇ 25, 2024

❝ರಾಜಕಾರಣಿಗಳು ಮಠ, ದೇವಸ್ಥಾನ, ಮಸೀದಿ, ಚರ್ಚಗಳಿಗೆ ಅನುದಾನ ನೀಡದೇ ವಿದ್ಯಾಮಂದಿರಗಳಿಗೆ ನೀಡಬೇಕು. ಇತ್ತೀಚಿನ ದಿನಗಳಲ್ಲಿ ಮಠಗಳು ಸೇರಿದಂತೆ ಕೆಲ ಧಾರ್ಮಿಕ ಕೇಂದ್ರಗಳು ವ್ಯವಹಾರ ಕೇಂದ್ರಗಳಂತೆ ವರ್ತಿಸುತ್ತಿವೆ ಎಂಬುದು ಜನರ ಭಾವನೆಯಾಗಿದೆ.” – ಸಂಗಮೇಶ ಬಬಲೇಶ್ವರ

ಕೆಪಿಸಿಸಿ ಮುಖಂಡರು, ವಿಜಯಪುರ




## ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಬಹಿರಂಗ ಪತ್ರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಕ್ರಿಯೆ

# ಮೊಮ್ಮಗನನ್ನು ವಿದೇಶಕ್ಕೆ ಕಳುಹಿಸಿದ್ದೇ ದೇವೇಗೌಡರು :ಸಿಎಂ

ಬೆಂಗಳೂರು: ಕಳೆದ ತಿಂಗಳಿಂದ ತಲೆಮರೆಸಿಕೊಂಡಿರುವ ಲೈಂಗಿಕ ದೌರ್ಜನ್ಯದ ಆರೋಪಿ, ಪ್ರಜ್ವಲ್ ರೇವಣ್ಣ ಜರ್ಮನಿಗೆ ಪಲಾಯನ ಮಾಡಲು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು ಸಹಾಯ ಮಾಡಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

“ದೇವೇಗೌಡರೇ ಪ್ರಜ್ವಲ್ ರೇವಣ್ಣನನ್ನು ಕಳುಹಿಸಿದ್ದಾರೆಂದು ನಾನು ಭಾವಿಸುತ್ತೇನೆ. ಈಗ ಅವರು ಬರೆದಿರುವ ಪತ್ರ ಸಾರ್ವಜನಿಕ ಬಳಕೆಗೆ ಮಾತ್ರ” ಎಂದು ಅವರು ಹೇಳಿದ್ದಾರೆ.

ತಮ್ಮ ಪಕ್ಷದ ಲೆಟರ್‌ಹೆಡ್‌ನಲ್ಲಿ ಪ್ರಜ್ವಲ್‌ಗೆ ಗುರುವಾರ ಸಾರ್ವಜನಿಕ ಪತ್ರ ಬರೆದಿರುವ ಮಾಜಿ ಪ್ರಧಾನಿಗಳು, ಪೊಲೀಸರಿಗೆ ಶರಣಾಗಬೇಕು ಎಂದು ತಮ್ಮ ಮೊಮ್ಮಗನಿಗೆ ಆಜ್ಞೆ ಮಾಡಿದ್ದು, ಬರದಿದ್ದರೆ ಕುಟುಂಬದ ಕೋಪವನ್ನು ಎದುರಿಸಬೇಕು ಎಂದು ಎಚ್ಚರಿಸಿದರು.

ಈ ಬಗ್ಗೆ ಎಕ್ಸ್‌ನಲ್ಲಿ ಪತ್ರ ಹಂಚಿಕೊಂಡ ಮಾಜಿ ಪ್ರಧಾನಿ ದೇವೇಗೌಡರು, ಮೇ 18 ರಂದು ನಾನು ದೇವಸ್ಥಾನಕ್ಕೆ ಪೂಜೆ ಸಲ್ಲಿಸಲು ಹೊರಟಿದ್ದಾಗ ಪ್ರಜ್ವಲ್ ರೇವಣ್ಣ ಅವರ ಬಗ್ಗೆ ಮಾಧ್ಯಮಗಳೊಂದಿಗೆ



ಮಾತನಾಡಿದ್ದೇನೆ, ಅವರು ನನಗೆ, ನನ್ನ ಇಡೀ ಕುಟುಂಬಕ್ಕೆ, ನನ್ನ ಸಹೋದ್ಯೋಗಿಗಳು, ಸ್ನೇಹಿತರು ಮತ್ತು ಅವರು ಉಂಟುಮಾಡಿದ ಆಘಾತ ಮತ್ತು ನೋವಿನಿಂದ ಚೇತರಿಸಿಕೊಳ್ಳಲು ನನಗೆ ಸ್ವಲ್ಪ ಸಮಯ ಹಿಡಿಯಿತು. ನನ್ನ ಮಗ ಹಾಗೂ ಕರ್ನಾಟಕದ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರು ಹಗರಣ ನಡೆದ ದಿನದಿಂದಲೂ ಅವರಿಗೆ ಕಾನೂನಿನಡಿಯಲ್ಲಿ ಕಠಿಣ ಶಿಕ್ಷೆಯಾಗಬೇಕು ಎಂದು ಪಕ್ಷದ ಕಾರ್ಯಕರ್ತರೇ ಹೇಳಿದ್ದರು ಎಂದರು.

ಕಳೆದ ಒಂದು ತಿಂಗಳಿನಿಂದ, ಸಿದ್ದರಾಮಯ್ಯ ಅವರು ಪ್ರಧಾನಿ ಮೋದಿಗೆ ಹಲವಾರು ಪತ್ರಗಳನ್ನು ಬರೆದಿದ್ದಾರೆ, ಅವರು ದೇಶದಿಂದ ಪಲಾಯನ ಮಾಡಲು ಬಳಸುತ್ತಿದ್ದ ರಾಜತಾಂತ್ರಿಕ ಪಾಸ್‌ಪೋರ್ಟ್ ಅನ್ನು ರದ್ದುಗೊಳಿಸುವಂತೆ ಕೇಂದ್ರವನ್ನು ಒತ್ತಾಯಿಸಿದ್ದಾರೆ. ದೇಶ ಬಿಟ್ಟು ಪಲಾಯನ ಮಾಡಲು ಹಾಗೂ ಕ್ರಿಮಿನಲ್ ಮೊಕದ್ದಮೆಗಳಿಂದ ತಪ್ಪಿಸಿಕೊಳ್ಳಲು ರಾಜತಾಂತ್ರಿಕ ಸವಲತ್ತುಗಳನ್ನು ದುರುಪಯೋಗಪಡಿಸಿಕೊಂಡಿದ್ದಾರೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

ಜೆಡಿಎಸ್ ಪಕ್ಷದ ಹಾಸನ ಸಂಸದ, 33 ವರ್ಷದ ಎನ್‌ಡಿಎ ಅಭ್ಯರ್ಥಿ ಏಪ್ರಿಲ್ 27 ರಂದು ಕ್ಷೇತ್ರದಲ್ಲಿ ಚುನಾವಣೆ ಮುಗಿದ ಒಂದು ದಿನದ ನಂತರ ದೇಶವನ್ನು ತೊರೆದಿದ್ದಾರೆ. ಅವರು ಹಲವಾರು ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪ ಮತ್ತು ಕೃತ್ಯವನ್ನು ಚಿತ್ರೀಕರಿಸಿದ್ದು, ವ್ಯಾಪಕ ಆಕ್ರೋಶಕ್ಕೆ ಕಾರಣವಾಗಿದೆ. ಕಳೆದ ತಿಂಗಳು ಆಪಾದಿತ ದೌರ್ಜನ್ಯದ ಹಲವಾರು ವೀಡಿಯೊಗಳು ಹೊರಬಂದ ನಂತರ ಪೊಲೀಸ್ ವಿಶೇಷ ತನಿಖಾ ತಂಡ ಪ್ರಕರಣದ ತನಿಖೆಯನ್ನು ಪ್ರಾರಂಭಿಸಿತು.

ಪ್ರಜ್ವಲ್ ರೇವಣ್ಣ ಅವರನ್ನು ಪತ್ತೆಹಚ್ಚಲು ಇಂಟರ್‌ಪೋಲ್‌ಗೆ ಎಚ್ಚರಿಕೆಗಳು ಮತ್ತು ಮಾಹಿತಿಗಾಗಿ ವಿನಂತಿಗಳನ್ನು ವಿಶ್ವದಾದ್ಯಂತ ಹಂಚಿಕೊಳ್ಳಲು ಅನುವು ಮಾಡಿಕೊಡುವ ಬ್ಲೂ ಕಾರ್ನರ್ ನೋಟಿಸ್ ನೀಡಲಾಗಿದೆ.

ಸೌಜನ್ಯ: ನಾನು ಗೌರಿ.ಕಾಂ

## ರಾಜ ನುಡಿ

ಸುರೂಪಿ ಚಿಟ್ಟೆಯಾಗಿ ಪ್ರಸಿದ್ಧಿ ಪಡೆಯೋಕೆ, ಕುರೂಪಿ ಕಂಬಳಿಹುಳು (caterpill-er) ವಾಗಿ ಎಲ್ಲಾ ಕೆಲಸವನ್ನು ಶ್ರಮವಹಿಸಿ ಮುಂಚೆಯೇ ಮಾಡಿರಬೇಕು. ಶ್ರಮವೇ ಸುಂದರ.

–ಡಾ. ರಾಜಶೇಖರ ನಾಗೂರ

## ಡಾ.ಹಳಕಟ್ಟಿ ಎಂಜಿನಿಯರಿಂಗ್ ಕಾಲೇಜ್ ನಲ್ಲಿ ತಾಂತ್ರಿಕ ಸಪ್ತಾಹ

ಉದಯರಶ್ಮಿ ನ್ಯೂಸ್

ವಿಜಯಪುರ: ನಗರದ ಬಿ.ಎಲ್.ಡಿ.ಇ ಸಂಸ್ಥೆಯ ವಚನ ಪಿತಾಮಹ ಡಾ. ಫ. ಗು ಹಳಕಟ್ಟಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ತಾಂತ್ರಿಕ ಸಪ್ತಾಹ ಕಾರ್ಯಕ್ರಮದ ಅಂಗವಾಗಿ ವತಿಯಿಂದ ಮೇ 22 ರಂದು ಬುಧವಾರ ಉದ್ಘಾಟನೆ ನಡೆಯಿತು.

ಓಪನ್ ಡೇ ಇವೆಂಟ್ ಅಂಗವಾಗಿ ಕಾಲೇಜಿನ ಅಂತಿಮ ವರ್ಷದ ವಿದ್ಯಾರ್ಥಿಗಳು ತಯಾರಿಸಿದ ನಾನಾ ಮಾದರಿಗಳ ಪ್ರದರ್ಶನ ನಡೆಯಿತು. ಕಾಲೇಜಿನ ನಾನಾ ವಿಭಾಗಳ 800ಕ್ಕೂ ಹೆಚ್ಚು ವಿದ್ಯಾರ್ಥಿಗಳು ಒಟ್ಟು 201 ಮಾದರಿಗಳನ್ನು ತಯಾರಿಸಿದ್ದರು. 79 ನಾವೀನ್ಯತೆ, 54 ಸಾಮಾಜಿಕ ಪರಿಣಾಮ, 15 ಪರಿಸರ ಕೇಂದ್ರಿತ ಹಾಗೂ 53 ಅನ್ವಯಿಕೆ(ಅಪ್ಲಿಕೇಶನ್) ವಿಭಾಗಗಳಲ್ಲಿ ಮಾದರಿಗಳು ಪ್ರದರ್ಶನವಾದವು.

ಈ ಸಂದರ್ಭದಲ್ಲಿ ಒಟ್ಟು 41 ಯೋಜನೆಗಳನ್ನು ಇಲಾಖೆಗಳಿಂದ ವರ್ಷದ ಅತ್ಯುತ್ತಮ ಯೋಜನೆ ಎಂದು ಪ್ರಶಸ್ತಿ ನೀಡಲಾಯಿತು.

ಕಾಲೇಜಿನ ಪ್ರಾಂಶುಪಾಲ ಡಾ. ವಿ. ಜಿ. ಸಂಗಮ ಅವರ ನೇತೃತ್ವದಲ್ಲಿ ನಡೆದ ಈ ಕಾರ್ಯಕ್ರಮವನ್ನು ಪ್ರೌಢಶಾಲೆ, ಪಿಯು ಮತ್ತು ಪಾಲಿಟೆಕ್ನಿಕ್ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಸಾರ್ವಜನಿಕರು ಮಾದರಿಗಳನ್ನು ವಿಕ್ಷಿಸಿ ಜ್ಞಾನಾರ್ಜನೆ ಮಾಡಿದರು. ಅಲ್ಲದೇ, ಈ ಕಾರ್ಯಕ್ರಮವು ಭೇಟಿ ನೀಡಿದ ವಿದಾರ್ಥಿಗಳು ಮತ್ತು ಪೋಷಕರಿಗೆ ಕ್ಯಾಂಪಸ್ ಪ್ರವಾಸಗಳು, ಉತ್ಕೃಷ್ಟತಾ ಕೇಂದ್ರಗಳಿಗೆ ಭೇಟಿ, ಪ್ರಯೋಗಾಲಯಗಳು, ಪ್ಲೇಸ್ಮೆಂಟ್ ಸೆಲ್ ಮತ್ತು ಗ್ರಂಥ-ಾಲಯಗಳ ಬಗ್ಗೆ ಹೆಚ್ಚಿನ ಮಾಹಿತಿ ಪಡೆಯಲು ಅನುಕೂಲ ಮಾಡಿಕೊಟ್ಟಿತು.

ಮೆಕ್ಯಾನಿಕಲ್ ಎಂಜಿನಿಯರಿಂಗ್ ವಿಭಾಗದ ಆರ್. ಎಸ್. ಎಲ್ಲೂರು, ಡಾ .ಎಸ್. ಜಿ. ಚೋಳಕೆ ಹಾಗೂ ಡಾ. ಆರ್. ಎನ್. ಜೀರಗಲ ಕಾರ್ಯಕ್ರಮ ಸಂಯೋಜಿಸಿದರು.

## ಕಾಲುವೆಗಳಿಗೆ ಹರಿಯದ ನೀರು: ರೈತರಿಂದ ರಸ್ತೆ ತಡೆದು ಪ್ರತಿಭಟನೆ

ಉದಯರಶ್ಮಿ ನ್ಯೂಸ್



ಇಂಡಿ: ತಾಲೂಕಿನ ಗುತ್ತಿ ಬಸವಣ್ಣ ಮತ್ತು ತಿಡಗುಂದಿ ಶಾಖಾ ಕಾಲುವೆ ಕೊನೆಯ ಭಾಗದ ಕೆರೆಕಟ್ಟೆಗಳಿಗೆ ಹಾಗೂ ಕಾಲುವೆಗಳಿಗೆ ನೀರು ಹ-ರಿಸದ ಕಾರಣ ಶುಕ್ರವಾರ ತಡವಲಗಾ ಗ್ರಾಮದ ಜೋಡಗುಡಿ ಹತ್ತಿರ ರೈತರು ರಸ್ತೆ ತಡೆದು ಪ್ರತಿಭಟನೆ ನಡೆಸಲು ಮುಂದಾದರು. ಆದರೆ ಪೊಲೀಸರು ರಸ್ತೆ ತಡೆಯಲು ಅವಕಾಶ ಮಾಡಿಕೊಡದ ಹಿನ್ನೆಲೆ ಜೋಡಗುಡಿಯ ಆವರಣದಲ್ಲಿ ರೈತರು ಧರಣಿ ನಡೆಸಿ ಪ್ರತಿಭಟಿಸಿದರು.

ಸ್ಥಳಕ್ಕೆ ಜಿಲ್ಲಾಧಿಕಾರಿಗಳು ಬಂದು ನಮ್ಮ ಸಮಸ್ಯೆ ಆಲಿಸಿ ಸಮಸ್ಯೆಗೆ ಪರಿಹಾರ ಸೂಚಿಸುವವರೆಗೆ ನಾವು ಧರಣಿ ನಡೆಸುತ್ತೇವೆ ಎಂದು ರೈತ ಮುಖಂಡರು ತಮ್ಮ ಆಕ್ರೋಶ ಹೊರಹಾಕಿದರು.

ಅನೇಕ ಬಾರಿ ಲಿಖಿತ ಹಾಗೂ ಮೌಖಿಕವಾಗಿ ಜಿಲ್ಲಾಧಿಕಾರಿಗಳಿಗೆ, ಸಂಬಂಧಿಸಿದ ಇಲಾಖೆಯ ಅಧಿಕಾ-ರಿಗಳಿಗೆ ಮನವಿ ಸಲ್ಲಿಸಿದ್ದೇವೆ. ತಡವಲಗಾ, ಅರ್ಥಗಾ, ಕೊಟ್ನಾಳ, ನಿಂಬಾಳ, ಸೇ-ರಿದಂತೆ ಇನ್ನಿತರ ಕೆರೆಗಳಿಗೆ ಹಾಗೂ ಗುತ್ತಿ ಬಸವಣ್ಣ ಕಾಲುವೆಯ ಕೊನೆಯ ಭಾಗದ ರೈತರಿಗೆ ರೂಗಿ, ಹಂಜಗಿ, ಚಿಕ್ಕಬೇವನೂರ, ಬೋಳೆಗಾಂವ, ಗಣವಲಗಾ, ತೆನ್ನೆಳ್ಳಿ ಗ್ರಾಮಗಳ ರೈತರಿಗೆ ಹಾಗೂ ಜಾನುವಾರುಗಳಿಗೆ ನೀರಿಲ್ಲದೆ ಸಾಕಷ್ಟು ತೊಂದರೆ ಉಂಟಾಗುತ್ತಿದೆ ಈಗ ಕೆರೆಗಳನ್ನು ತುಂಬಿದರೆ ಆಯಾ ಗ್ರಾಮಗಳ ರೈತರಿಗೆ ಅನುಕೂಲವಾಗುತ್ತದೆ ಎಂದು ರೈತರು ತಿಳಿಸಿದರು. ಪ್ರತಿಭಟನಾ ಸ್ಥಳಕ್ಕೆ ಬಿಗಿ ಪೊಲೀಸ್ ಬಂದೋಬಸ್ ನೀಡಲಾಗಿತ್ತು.


ಪ್ರತಿಭಟನೆಯಲ್ಲಿ ಭೀಮಸೇನಾ ಟೋಕರೆ, ಮಲ್ಲನಗೌಡ ಪಾಟೀಲ, ಚಿದಾನಂದ ಮದರಿ, ಚನ್ನಪ್ಪ ಮಿರಗಿ, ವಿಠೋಬಾ ಹುಣಶ್ಯಾಳ, ಮಲ್ಲಪ್ಪ ನೇಕಾರ, ಮಹಾದೇವ ಸುದಾಮ, ಈರಪ್ಪಾ ಗೋಟ್ಯಾಳ, ಸುಭಾಷ ಗೊಳ್ಳಗಿ, ಶರಣಪ್ಪ ತಾರಾಪೂರ, ಗುರಪಾದ ತಾರಾಪೂರ, ಅಂಬಣ್ಣ ಪಂತೋಜಿ, ಭೀಮರಾಯ ಪುಟಾಣಿ, ಭೀಮರಾಯ ಬಿರಾದಾರ, ಭೀಮು ಕಪಾಲಿ, ಹೂವಪ್ಪಾ ಶಿರಶ್ಯಾಡ ಸೇರಿದಂತೆ ನೂರಾರು ರೈತರು, ರೈತ ಮಹಿಳೆಯರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

### ಕೆಬಿಜೆಎನ್‌ಎಲ್ ಅಧಿಕಾರಿ, ಎಸಿ ಭೇಟಿ:

ಧರಣಿ ನಿರತ ಸ್ಥಳಕ್ಕೆ ಕೆಬಿಜೆಎನ್‌ಎಲ್ ಅಧಿಕಾರಿ ಮನೋಜಕುಮಾರ ಗಡಬಳ್ಳಿ, ಕಂದಾಯ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ್ ಭೇಟಿ ನೀಡಿ ರೈತರ ಮನವೊಲಿಸುವ ಪ್ರಯತ್ನ ಮಾಡಿದರು.

ಆದರೆ ರೈತರು ಅವರ ಮಾತಿಗೆ ಮನ್ನಣೆ ಮಾಡದೆ, ಜಿಲ್ಲಾಧಿಕಾರಿಗಳು ಬಂದು ನಮ್ಮ ಸಮಸ್ಯೆ ಈಡೇರಿಸಬೇಕು. ಅಲ್ಲಿಯವರೆಗೂ ನಾವು ಧರಣಿ ಹಿಂಪಡೆಯಲ್ಲ ಎಂದು ಪಟ್ಟು ಹಿಡಿದರು. ಕೊನೆಗೆ ಅಧಿಕಾರಿಗಳು ನಾವೇ ಜಿಲ್ಲಾಧಿಕಾರಿಗಳ ಹತ್ತಿರ ಹೋಗಿ ಚರ್ಚಿಸಿ ನಿಮಗೆ ತಿಳಿಸುವುದಾಗಿ ಹೇಳಿ ಪ್ರತಿಭಟನಾ ಸ್ಥಳದಿಂದ ಹೊರಹೋದ ಘಟನೆ ನಡೆಯಿತು.

## ವಚನ ಚಿಂತನ 385



### ಇಷ್ಟಲಿಂಗ – ಕರಸ್ಥಲದ ಜ್ಯೋತಿ

*ಕರಸ್ಥಲದ ಜ್ಯೋತಿಯಿದು. ಕರುವಿಟ್ಟ ಎರಕವಿದು.*
*ಇದರ ನೆಲೆಯ ತಿಳಿದು ನೋಡಿದಡೆ ನಿಜದಾನಂದವು.*
*ಹೊಲಬುದೋರದ ನಿಸ್ಸಂಗದ ಹೊಲಬನ-ರಿದು*
*ಕೂಡಿದಾತನೆ ಶರಣ ಕಾಣಾ! ರಾಮನಾಥ.*
*– ಜೇಡರ ದಾಸಿಮಯ್ಯನವರು*

ಕಲ್ಯಾಣ ಕ್ರಾಂತಿಯ ಸಂದರ್ಭದಲ್ಲಿ ನಾಶವಾದ ಅನೇಕ ವಚನಗಳಲ್ಲಿ ಇಷ್ಟಲಿಂಗ ತಯಾರಿಕೆಯ ಕುರಿತು ಬರೆದ ವಚನಗಳು ಸಹ ನಾಶಹೊಂದಿರುವ ಸಾಧ್ಯತೆಗಳಿವೆ. ಆದ್ಯ ವಚನಕಾರರಾದ ಜೇಡರ ದಾಸಿಮಯ್ಯನವರು ಈ ವಚನದಲ್ಲಿ ಇಷ್ಟಲಿಂಗವನ್ನು ಕರಸ್ಥಲದ ಜ್ಯೋತಿ ಎಂದು ಕರೆಯುತ್ತಾ, ಕರುವಿಟ್ಟ ಎರಕವಿದು ಎನ್ನುವಲ್ಲಿ ಇಷ್ಟಲಿಂಗಕ್ಕೆ ಬಳಸುವ ಕಂತೆಯ ಬಗ್ಗೆ ಸುಳುಹೂ ನೀಡಿದ್ದಾರೆ. ಕಂತೆಗೆ ಶಿಲಾರಸ(ಂಟಭಜಡಿ), ಇಂಗಳಿಕ(ಸಿಂಧೂರ–ಗಿಜಡಿಟುಟುರಂಟಿ), ರಾಳ(ಖಿಘುಟಿ), ಅರಗು(ಜಚಿಟುಟರಿ–ತಿಚಿಥ), ರುಮಾಮಸ್ತಕಿ(ಒಚಿಥಿ–ಣುಥಿ)ಗಳನ್ನು ಬಳಸಲಾಗುತ್ತದೆ. ಇವೆಲ್ಲವುಗಳು ಕಣ್ಣಿನ ರೆಟಿನಾದಿಂದ ಬೆಳಕ(ಚೈತನ್ಯವ)ನ್ನು ಸ್ವೀಕರಿಸಲು ಪೂರಕ ಕಾರ್ಯನಿರ್ವಹಿಸುವಂತಹ ಪ್ರಕಾಶ ಸಂವೇದನಾಶೀಲ ವರ್ಣದ್ರವ್ಯಗಳು. ಇವೆಲ್ಲವುಗಳು ಲಿಂಗಕ್ಕೆ ಹೊಳಪು ನೀಡುತ್ತವೆ. ಆ ಕಾರಣಕ್ಕಾಗಿ ಇಲ್ಲಿ ಕರಸ್ಥಲದ ಜ್ಯೋತಿ ಎಂದಿರುವುದು. ಅಂತಹ ಲಿಂಗವನ್ನು ಅನಿಮಿಷ ದೃಷ್ಟಿಯಿಂದ ನಿರೀಕ್ಷಿಸಿದಾಗ ದೊರೆಯುವ ಆನಂದವನ್ನು ನಿಜದಾನಂದ (ಇದರ ನೆಲೆಯ ತಿಳಿದು ನೋಡಿದಡೆ ನಿಜದಾನಂದವು.) ಎಂದೆನ್ನುತ್ತಾ, ಅಂಗ ಲಿಂಗ ಭೇದ ಮರೆತು ಉಂಟಾಗುವ ಲಿಂಗಾನುಸಂಧಾನವನ್ನು ‘ಹೊಲಬುದೋರದ ನಿಸ್ಸಂಗದ ಹೊಲಬನರಿದು ಕೂಡುವವನೆ ಶರಣ.’ ಇಷ್ಟಲಿಂಗದಿಂದ ಶರಣತ್ವ ಪ್ರಾಪ್ತಿಯಾಗುತ್ತದೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

## ರಕ್ತ ಸಂಬಂಧಕ್ಕಿಂತ ಭಕ್ತಿ ಸಂಬಂಧ ಮುಖ್ಯ :ಸಂಗಮೇಶ ಬಬಲೇಶ್ವರ

ಉದಯರಶ್ಮಿ ನ್ಯೂಸ್

ಆಲಮಟ್ಟಿ: ನಾಡಿನ ಅಭಿವೃದ್ಧಿಯಲ್ಲಿ ಮಠಗಳ ಪಾತ್ರ ಮಹತ್ವದ್ದಾಗಿದ್ದು, ರಕ್ತ ಸಂಬಂಧಕ್ಕಿಂತ ಭಕ್ತಿ ಸಂಬಂಧ ಮುಖ್ಯವಾಗಿದೆ ಎಂದು ಕೆಪಿಸಿಸಿ ಮುಖಂಡ ಸಂಗಮೇಶ ಬಬಲೇಶ್ವರ ಹೇಳಿದರು.

ಗುರುವಾರ ಇಲ್ಲಿನ ಪುರವರ ಹಿರೇಮಠ ಅನ್ನದಾನೇಶ್ವರ ಶಿವಯೋಗಿಗಳ ಜಾತ್ರಾಮಹೋತ್ಸವದ ಅಂಗವಾಗಿ ನಡೆದ ಧರ್ಮಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಸಮಾಜದ ಸರ್ವಾಂಗೀಣ ಅಭಿವೃದ್ಧಿಯಲ್ಲಿ ಮಠಾಧೀಶರ ಪಾತ್ರ ಅತೀ ಮಹತ್ವದ್ದಾಗಿದ್ದು, ಮಠಾಧೀಶರು ಮತ್ತು ಭಕ್ತರ ಸಂಬಂಧವು ತಾಯಿ ಮಕ್ಕಳ ಸಂಬಂಧದಂತಿರುತ್ತದೆ. ರಾಜ-ಕಾರಣಿಗಳು ಮಠ, ದೇವಸ್ಥಾನ, ಮಸೀದಿ, ಚರ್ಚಗಳಿಗೆ ಅನುದಾನ ನೀಡದೇ ವಿದ್ಯಾಮಂದಿರಗಳಿಗೆ ನೀಡಬೇಕು. ಇತ್ತೀಚಿನ ದಿನಗಳಲ್ಲಿ ಮಠಗಳು ಸೇ-ರಿದಂತೆ ಕೆಲ ಧಾರ್ಮಿಕ ಕೇಂದ್ರಗಳು ವ್ಯವಹಾರ ಕೇಂದ್ರಗಳಂತೆ ವರ್ತಿಸುತ್ತಿವೆ ಎಂದು ಜನರ ಭಾವನೆಯಾಗಿದೆ, ಆದರೆ ಆಲಮಟ್ಟಿಯ ಅನ್ನದಾನೇಶ್ವರ ಮಠವು ವಿಭಿನ್ನವಾಗಿದ್ದು, ಬಡ ಭಕ್ತರ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ, ಅನ್ನದಾಸೋಹ, ಅಕ್ಷರ ದಾಸೋಹಗಳಂತಹ ಕ್ರಮ ಕೈಗೊಳ್ಳಲು ಅಣಿಯಾಗುತ್ತಿರುವುದು ಸಂತಸವಾಗಿದೆ ಎಂದು ಸಂಗಮೇಶ ಬಬಲೇಶ್ವರ ಶ್ಲಾಘಿಸಿದರು.

ಇದಕ್ಕೂ ಮೊದಲು ಪ್ರಾಸ್ತಾವಿಕವಾಗಿ ಮಾತನಾಡಿದ ಕೊಣ್ಣೂರಿನ ವಿಶ್ವಪ್ರಭುಸ್ವಾಮೀಜಿ, ಭಕ್ತರಾದವರು



ಭಗವಂತನ ಕೃಪೆಗೆ ಪಾತ್ರರಾಗಲು ನಿಸ್ವಾರ್ಥ-ರ್, ಶ್ರದ್ಧೆ, ಭಕ್ತಿಯಿಂದ ಸಧ್ಯಾನಿಸಬೇಕು ಎಂದರು.

ಸಾನಿಧ್ಯವಹಿಸಿದ ಗಿರಿಸಾಗರದ ರುದ್ರಮುನಿಸ್ವಾಮೀಜಿ ಮಾತನಾಡಿ, ಆಲಮಟ್ಟಿಯು ಜಂಗಮರು ಶತಮಾನಗಳ ಹಿಂದೆ ನುಡಿದ ವಾಣಿ, ಅವರ ಸಂಕಲ್ಪವು ಈಗ ಆಲಮಟ್ಟಿ ಬಳಿಯಲ್ಲಿ ಬೃಹತ್ ಜಲಾಶಯ ನಿರ್ಮಾಣವಾಗಿದೆ. ಆಲಮಟ್ಟಿಯು ಬಂಥನಾಳ ಶಿವಯೋಗಿಗಳ ತಾಯಿಯ ತವರೂರಾಗಿದ್ದು, ಬಸವಣ್ಣನವರ ವಚನಗಳನ್ನು ಸಂರಕ್ಷಣೆ ಮಾಡಲು

ಫ.ಗು.ಹಳಕಟ್ಟಿ ಮತ್ತು ಮಂಜಪ್ಪ ಹರ್ಡೇಕರ ಅವರಿಗೆ ಆಲಮಟ್ಟಿಯ ಇದೇ ಮಠದಲ್ಲಿ ಒಂದು ಕೋಣೆಯನ್ನು ಕೊಡಿಸಿದ್ದರು ಎಂದರು.

ಆಲಮಟ್ಟಿಯಲ್ಲಿ ಈ ಹಿಂದೆಯೇ ಬಂಥನಾಳದ ಶಿವಯೋಗಿಗಳ ಇಚ್ಛೆಯಂತೆ ಮಂಜಪ್ಪ ಹರ್ಡೇಕರ, ಫ.ಗು.ಹಳಕಟ್ಟಿಯಂತಹ ಹಿರಿಯರು ಶಿಕ್ಷಣ ಸಂಸ್ಥೆಯನ್ನು ಹುಟ್ಟುಹಾಕಿ ಬಡ ಗ್ರಾಮೀಣ ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗಾಗಿ ಅಕ್ಷರದಾಸೋಹದೊಂದಿಗೆ ಅನ್ನದಾಸೋಹವನ್ನೂ ನೀಡುತ್ತಿದ್ದರು. ಯಾವುದೋ ಒಂದು ಕಾಲಘಟ್ಟದಲ್ಲಿ ಶಿಕ್ಷಣ ಸಂಸ್ಥೆಯು ಮಠದ ಕೈ ತಪ್ಪಿಹೋಗಿದೆ. ಮತ್ತೆ ಈ ಭಾಗದಲ್ಲಿ ಶೈಕ್ಷಣಿಕ ಕ್ರಾಂತಿಗಾಗಿ ಈಗಿರುವ ರುದ್ರಮುನಿ ಸ್ವಾಮೀಜಿಯವರು ಸಿಬಿಎ▯▯▯ಇ ಶಿಕ್ಷಣ ಸಂಸ್ಥೆ ಹಾಗೂ ಮಕ್ಕಳಿಗೆ ವಸತಿ ನಿಲಯಗಳನ್ನು ಆರಂಭಿಸಲು 2ಕೋಟಿ ವೆಚ್ಚದಲ್ಲಿ ಸುಸಜ್ಜಿತ ಕಟ್ಟಡ ನಿರ್ಮಿಸಿದ್ದಾರೆ ಎಂದು ಹೇಳಿದರು.

ನಿಡಗುಂದಿಯ ರುದ್ರೇಶ್ವರ ಸಂಸ್ಥಾನ ಮಠದ ರುದ್ರಮುನಿಸ್ವಾಮೀಜಿ ಸಾನಿಧ್ಯವಹಿಸಿ ಮಾತನಾಡಿದರು.

ಅನ್ನದಾನೇಶ್ವರ ಪುರವರ ಮಠದ ರುದ್ರಮುನಿಸ್ವಾಮೀಜಿ ಮಾತನಾಡಿದರು.

ಧಾರ್ಮಿಕ ಸಭೆಯಲ್ಲಿ ಮುತ್ತತ್ತಿ ಹಿರೇಮಠದ ಗುರುಲಿಂಗ ಸ್ವಾಮೀಜಿ ಬಿಲ್ ಕೆರೂರಿನ ಬಿಲ್ವಾಶ್ರಮ ಹಿರೇಮಠದ ಸಿದ್ದಲಿಂಗ ಸ್ವಾಮೀಜಿ ನೇತೃತ್ವವಹಿಸಿದ್ದರು.

ಬೀಳಗಿಯ ಗುರುಪಾಸ್ವಾಮೀಜಿ, ಚಿಮ್ಮಲಗಿಯ ಸಿದ್ದರೇಣುಕ ಸ್ವಾಮೀಜಿ, ನಂದವಾಡಗಿಯ ಅಭಿನವ ಚನ್ನಬಸವ ಸ್ವಾಮೀಜಿ, ಇಟಗಿಯ ಗುರುಶಾಂತವೀರಸ್ವಾಮೀಜಿ, ಕುಂದರಗಿಯ ವೀರಸಂಗಮೇಶ್ವರ ಸ್ವಾಮೀಜಿ, ಹುನಗುಂದದ ಅಮರೇಶ್ವರ ದೇವರು ಅವರುಗಳ ಸಮ್ಮುಖದಲ್ಲಿ ನಡೆದವು.

ವಿಶ್ರಾಂತ ನ್ಯಾಯಮೂರ್ತಿ ರಾಚಪ್ಪ ಚಿನಿವಾಲ, ಅಶೋಕ ಚಿನಿವಾರ, ಭರತರಾಜ್ ದೇಶಮುಖ, ಪ್ರಕಾಶ ಚಿನಿವಾಲರ, ಸಂಗಣ್ಣ ಚಿನಿವಾಲರ, ಶರಣು ಆಲೂರ, ಸಿದ್ದಲಿಂಗೇಶ ಚಿನಿವಾರ, ಪ್ರಭು ದೇಸಾಯಿ, ಸಂಗು ಸಜ್ಜನ್, ಎನ್.ಎಂ.ಬಿರಾದಾರ, ಸಿ.ಕೆ. ಹೊಸಮನಿ, ಸಂಗಮೇಶ ಬಬಲೇಶ್ವರ, ಬಸವರಾಜ ಬಾದರದಿನ್ನಿ, ಕೆಬಿಜೆನ್ನೆಲ್ ಮುಖ್ಯ

ಅಭಿಯಂತರ ಎಚ್.ಎನ್.ಶ್ರೀನಿವಾಸ, ಎನ್.ಎಚ್.ವರದರಾಜು, ಆರ್.ಎಲ್.ಹಳ್ಳೂರ, ಬಿ.ಎಸ್.ಪಾಟೀಲ್, ರವೀಂದ್ರನಾಥ ಹಜೇರಿ, ಮಹೇಶ ಪಾಟೀಲ, ಉಮೇಶ ಹಿರೂರಮಠ, ರವಿ ಚಂದ್ರಗಿರಿರವರ, ಕುಮಾರ ಹಂಚಿನಾಳ, ಜಿ.ಸಿ.ವಂದಾಲ, ವಿಠ್ಠಲ ಜಾಧವ, ಎಸ್.ಬಿ.ದಳವಾಯಿ, ಮಂಜುನಾಥ ಹಿರೇಮಠ ಸೇರಿದಂತೆ ವಿವಿಧ ಗಣ್ಯರು ಪಾಲ್ಗೊಂಡಿದ್ದರು.

ಕಾರ್ಯಕ್ರಮದಲ್ಲಿ ಶಿಕ್ಷಕ ಆನಂದ ರೇವಡಿ ಸ್ವಾಗತಿಸಿ, ನಿರೂಪಿಸಿದರು.

### ಅನ್ನದಾನೇಶ್ವರ ಪುರವರ ಹಿರೇಮಠದ ಜಾತ್ರಾ ಮಹೋತ್ಸವ



ಆಲಮಟ್ಟಿ: ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಆಗಿಹುಣ್ಣಿಮೆಯಂದು ಇಲ್ಲಿನ ಅನ್ನದಾನೇಶ್ವರ ಪುರವರ ಹಿರೇಮಠದ ಜಾತ್ರಾ ಮಹೋತ್ಸವವು ಸಡಗರ ಸಂಭ್ರಮದಿಂದ ಜರುಗಿತು.

ಜಾತ್ರಾ ಮಹೋತ್ಸವದ ಅಂಗವಾಗಿ ಗುರುವಾರ ಬೆಳಗ್ಗೆ 6ಗಂ. ಗೆ ಶ್ರೀ ಅನ್ನದಾನೇಶ್ವರ ಶಿವಯೋಗಿಗಳ ಕರ್ತೃಗದ್ದುಗೆಗೆ ಮಹಾರುದ್ರಾಭಿಷೇಕ, ಸಹಸ್ರಬಿಲ್ವಾರ್ಚನೆ, ಮಹಾಮಂಗಳಾರತಿ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು.

ನಂತರ ಷಟಸ್ಥಲ ಧ್ವಜಾರೋಣವನ್ನು ನಿಡಗುಂದಿಯ ರುದ್ರೇಶ್ವರ ಸಂಸ್ಥಾನಮಠದ ಶ್ರೀ ರುದ್ರಮುನಿಸ್ವಾಮೀಜಿ ಹಾಗೂ ರಾಷ್ಟ್ರಧ್ವಜಾರೋಹಣವನ್ನು ಶ್ರೀಭರತರಾಜ ದೇಶಮುಖ ನೆರವೇರಿಸಿದರು.

ಮಧ್ಯಾಹ್ನ ಪಲ್ಲಕ್ಕಿ ಮೆರವಣಿಗೆಯು ಮಾರುಕಟ್ಟೆ ಆವರಣದಲ್ಲಿರುವ ಶ್ರೀಬಸವೇಶ್ವರ ದೇವಸ್ಥಾನದಿಂದ ಹೊರಟು ಈಶ್ವರ ದೇವಸ್ಥಾನದಲ್ಲಿ ಪೂಜೆ, ಬಿ.ಎ.ದೇಶಮುಖ ಅವರ ವಾಡೆಯಲ್ಲಿ ವಿಶೇಷ ಪೂಜೆ, ಶ್ರೀಹನುಮಾನ ದೇವಸ್ಥಾನದಲ್ಲಿ ಪೂಜೆ ನೆರವೇರಿಸಿದ ನಂತರ ಸ್ಟೇಟ್ ಬ್ಯಾಂಕ್ ಮಾರ್ಗವಾಗಿ ಶ್ರೀ ಮಠಕ್ಕೆ ಆಗಮಿಸಿತು.

ಸಂಜೆಯವೇಳೆ ಸಾವಿರಾರು ಭಕ್ತರ ಮಧ್ಯದಲ್ಲಿ ಮಹಾರಥೋತ್ಸವ ಜರುಗಿತು.

# ಆತ್ಮವಿಶ್ವಾಸ ವಿದ್ಯಾರ್ಥಿ ಜೀವನದ ಯಶಸ್ಸಿನ ಕೀಲಿಕೈ :ಬಂಡೆ



**ಉದಯರಶ್ಮಿ ನ್ಯೂಸ್**

ವಿಜಯಪುರ: ಶಿಸ್ತು, ಸಮಯ ಪ್ರಜ್ಞೆ, ಆತ್ಮವಿಶ್ವಾಸವು ವಿದ್ಯಾರ್ಥಿ ಜೀವನದ ಯಶಸ್ಸಿನ ಕೀಲಿಕೈಯಾಗಿದ್ದು, ಮಕ್ಕಳು ಅವನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಶಿಕ್ಷಣದ ಸಾರ್ಥಕತೆ ಪಡೆಯಬೇಕು ಎಂದು ಶಿಕ್ಷಕ ಸಾಹಿತಿ ಸಂತೋಷ ಬಂಡೆ ಹೇಳಿದರು.

ಶುಕ್ರವಾರದಂದು ನಗರದ ಷಣ್ಮುಖಾರೂಢ ಮಠದಲ್ಲಿ ಅಭಿನವಶ್ರೀ ಕೋಚಿಂಗ್ ಕ್ಲಾಸಿಸ್ ನ ಬೇಸಿಗೆ ವಿಶೇಷ ಶಿಬಿರದ ಸಮಾರೋಪ ಸಮಾರಂಭದಲ್ಲಿ ವಿಶೇಷ ಉಪನ್ಯಾಸಕರಾಗಿ ಅವರು ಮಾತನಾಡಿದರು.

ಮಕ್ಕಳು ಸಮಯದ ಸದುಪಯೋಗ ಮಾಡಿಕೊಂಡಾಗ ಉತ್ತಮ ಕಲಿಕೆ ಸಾಧ್ಯವಾಗುತ್ತದೆ. ಇಂದಿನ ಸ್ಪರ್ಧಾತ್ಮಕ ಮತ್ತು ಆದ-ುನಿಕ ತಂತ್ರಜ್ಞಾನ ಯುಗದಲ್ಲಿ ವಿದ್ಯಾರ್ಥಿಗಳು ಜೀವನ ನಿರ್ವಹಣಾ ಕೌಶಲ್ಯ ಜ್ಞಾನ ಹೊಂದಬೇಕು ಎಂದು ಹೇಳಿದರು.

ಕನ್ನಡ ಶಿಕ್ಷಕ ಮಲ್ಲಿಕಾರ್ಜುನ ಪಡಂದರ ಮಾತನಾಡಿ, ಮಾನವೀಯ ಮೌಲ್ಯಗಳನ್ನು ಬೆಳೆಸುವುದೇ ನಿಜವಾದ ಶಿಕ್ಷಣ. ಮಕ್ಕಳನ್ನು ಮೊಬೈಲ್ ಗಳಿಂದ ದೂರವಿರಿಸಿ ಅವರಿಗೆ ಪುಸ್ತಕದ ಪ್ರೀತಿಯನ್ನು ಹೆಚ್ಚಿಸಬೇಕು. ಓದುವ ಹವ್ಯಾಸವು ಮಕ್ಕಳಿಗೆ ಹೊಸ ಜಗತ್ತನ್ನು ನೀಡಬಲ್ಲದು ಎಂದರು.

ಉಪನ್ಯಾಸಕ ಅಮರೇಶ ಸಾಲಕ್ಕಿ ಮಾತನಾಡಿ,

ವಿದ್ಯೆಯು ಬಳಸಿದಷ್ಟು ಸಮೃದ್ಧವಾಗಿ ಬೆಳೆಯುವ, ಎಲ್ಲ ಸಂಪತ್ತಿಗಿಂತ ಮಿಗಿಲಾದದ್ದು. ಆದ-ರಿಂದ ತಾಯಂದಿರು ಮಕ್ಕಳಿಗೆ ಉತ್ತಮ ಶಿಕ್ಷಣ, ಸಂಸ್ಕಾರ ನೀಡಿ ಮಕ್ಕಳ ಜ್ಞಾನ ಪ್ರೌಢಿಮೆ ಹೆಚ್ಚಿಸಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಅಭಿನವಶ್ರೀ ಕೋಚಿಂಗ್ ಕ್ಲಾಸಿಸ್ ಮುಖ್ಯಸ್ಥ ಅಶೋಕ ಬಿರಾದಾರ ಮಾತನಾಡಿ, ಮಕ್ಕಳು ಸಾಧನೆಯ ಗುರಿಯನ್ನು ಇಟ್ಟುಕೊಂಡು ನಿರಂತರವಾಗಿ ಅಭ್ಯಸಿಸಿ ಆ ಗುರಿಯುತ್ತ ಮುನ್ನಡೆಯಬೇಕು. ನಿರಂತರ ಅಭ್ಯಾಸ ಮಾತ್ರ ಮಕ್ಕಳನ್ನು ಬೆಳೆಸಬಲ್ಲದು ಎಂದು ಹೇಳಿದರು.

ಶಿಕ್ಷಕಿ ಮಾಯಾ ನೈತಿಕ ಮೌಲ್ಯಗಳ ಕುರಿತು ಮಾತನಾಡಿದರು.

ವಿವಿಧ ವರ್ಗದ ಮತ್ತು ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ವಿಶೇಷ ಸಾಧನೆ ಮಾಡಿದ ಮಕ್ಕಳಿಗೆ ಬಹುಮಾನ ವಿತರಿಸಲಾಯಿತು.

ಇದೇ ಸಂದರ್ಭದಲ್ಲಿ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿದವು.

ಶಿಕ್ಷಕರಾದ ಎಸ್ ಬಿ ಗುಲಗಂಜಿ, ರಾಜು ಕೆಂಗಲಗುತ್ತಿ, ಅಲ್ಲಾಭಕ್ಷ ಇನಾಮದಾರ, ಗೌಡಪ್ಪ ಬಿರಾದಾರ, ಶ್ರೀಶೈಲ ಯಂಕಂಚಿ, ಈಶ್ವರ ಹಡಗಿನಾಳ, ಮಹಾದೇವ ದೇವತಿ, ವಿಶಾಲ ಪಾಟೀಲ, ರೂಪಾ ಬಿರಾದಾರ, ಲಕ್ಷ್ಮೀ ಬಿರಾದಾರ, ರೇಣುಕಾ ಕೊಡೆಕಲ್ಲ, ಭುವನೇಶ್ವರಿ, ಪೂಜಾ ಕಾಂಬಳೆ, ಪ್ರಿಯಾಂಕ ಬೀಳಗಿ ಹಾಗೂ ಪಾಲಕ ಪ್ರತಿನಿಧಿ ಹನಮಂತರಾಯ ಪಾಟೀಲ ಸೇ-ರಿದಂತೆ ಅನೇಕ ಪಾಲಕರು, ಮಕ್ಕಳು ಉಪಸ್ಥಿತರಿದ್ದರು.

# ಪಿಎಚ್‌ಡಿ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಭಾರತ ಸರ್ಕಾರದ ಬುಡಕಟ್ಟು ವ್ಯವಹಾರಗಳ ಸಚಿವಾಲಯವು 2024-25ನೇ ಸಾಲಿನ ಪರಿಶಿಷ್ಟ ಪಂಗಡ ಹಾಗೂ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಂದ ರಾಷ್ಟ್ರೀಯ ಸಾಗರೋತ್ತರ ವಿದ್ಯಾರ್ಥಿ ವೇತನ ಯೋಜನೆ (NOS)ಗೆ ಆನ್ ಲೈನ್ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಪದವಿ. ಪಿಎಚ್‌ಡಿ ಉನ್ನತ ವ್ಯಾಸಂಗಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ನೀಡಲಾಗುತ್ತಿದ್ದು, ಆಸಕ್ತ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ https://overseas.tribal.gov.in ವೆಬ್ ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಮೇ 31 ರಂದು ಕೊನೆ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ 8352276124 ಗೆ ಸಂಪರ್ಕಿಸಬಹುದಾಗಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಧೂಳಖೇಡ: ವೃತ್ತಿಪರ ಕೋರ್ಸ್‌ಗೆ ಅರ್ಜಿ ಆಹ್ವಾನ

ವಿಜಯಪುರ: 2024-25ನೇ ಸಾಲಿನಲ್ಲಿ ಸರ್ಕಾರಿ ಕೈಗಾರಿಕೆ ತರಬೇತಿ ಸಂಸ್ಥೆ ಧೂಳಖೇಡನಲ್ಲಿ ಇಲೆಕ್ಟ್ರಿಷಿಯನ್, ಫಿಟ್ಟರ್, ವೃತ್ತಿಗಳಿಗೆ ಮೆರಿಟ್ ಕಮ್ ರಿಜರ್ವೇಶನ್ ಆದ-ರಿತ ಪ್ರವೇಶಾತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

1,200 ರೂ ವಾರ್ಷಿಕ ಶುಲ್ಕವಿದ್ದು, ಜುನ್ 6ರ ವರೆಗೆ ಇಲಾಖೆ ವೆಬ್‌ಸೈಟ್ www. cite.karnataka.gov.in ನಲ್ಲಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ 9008451727, 9901477667, 8123290323, 9481528220 ಗಳಿಗೆ ಸಂಪರ್ಕಿಸಬಹುದು ಎಂದು ಸರ್ಕಾರಿ ಕೈಗಾರಿಕೆ ತರಬೇತಿ ಸಂಸ್ಥೆ ಧೂಳಖೇಡದ ಪ್ರಾಚಾರ್ಯರಾದ ಎ.ಕೆ. ಚವ್ಹಾಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶುದ್ಧ ಕುಡಿವ ನೀರು ಸರಬರಾಜಿಗೆ ಜಿಲ್ಲಾಧಿಕಾರಿ ಸೂಚನೆ

**ಉದಯರಶ್ಮಿ ನ್ಯೂಸ್**




ವಿಜಯಪುರ: ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ಮೂಲಗಳಲ್ಲಿ ಕೊಳಚೆ ನೀರು ಸೇರದಂತೆ ಕಡ್ಡಾಯವಾಗಿ ಮುನ್ನೆಚ್ಚರಿಕೆ ವಹಿಸಿ ಸಾರ್ವಜನಿಕ-ರಿಗೆ ಶುದ್ಧ ಕುಡಿಯುವ ನೀರು ಪೂರೈಸಬೇಕು ಎಂದು ಜಿಲ್ಲಾಧಿಕಾರಿ ಟಿ. ಭೂಬಾಲನ್ ಸೂಚಿಸಿದರು.

ಶುಕ್ರವಾರ ಜಿಲ್ಲಾಧಿಕಾರಿ ಕಚೇ-ರಿಯ ಕೆಸ್ವಾನ್ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಅಧಿಕಾ-ರಿಗಳೊಂದಿಗೆ ಶುದ್ಧ ಕುಡಿಯುವ ನೀರು ಪೂರೈಕೆ ಹಾಗೂ ಮಾನ್ಸೂನ್ ಪೂರ್ವ ಸಿದ್ಧತೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರತಿದಿನವೂ ಕುಡಿಯುವ ನೀರಿನ ಗುಣಮಟ್ಟವನ್ನು ಪರೀಕ್ಷೆ ಮಾಡಬೇಕು. ನಗರ ಪ್ರದೇಶಗಳಲ್ಲಿ ಯುಜಿಡಿ ಹಾಗೂ ಚರಂಡಿಯ ಕೊಳಚೆ ನೀರು, ಕುಡಿಯುವ ಪೈಪ್‌ಲೈನ್ ಹಾದುಹೋದ ಕಡೆ ಬಹು ಎಚ್ಚರಿಕೆಯಿಂದ, ಕಾಮಗಾರಿ ನಡೆಯುವಾಗ ಪೈಪ್‌ಲೈನ್ ಒಡೆದು ಹೊಗದಂತೆ ಗಮನಿಸಬೇಕು. ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ಜೊತೆ ಕೊಳಚೆ ನೀರು ಸೇರಿ ಕಲುಷಿತವಾಗದಂತೆ ನೋಡಿಕೊಳ್ಳಿ , ಒಂದು ವೇಳೆ ಇದರಲ್ಲಿ ವಿಫಲವಾದರೆ ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳಲಾಗುವುದು. ಏನಾದರೂ ಸಮಸ್ಯೆಗಳು ಕಂಡು ಬಂದರೆ ಕೂಡಲೇ ಮೇಲಾಧಿಕಾ-ರಿಗಳ ಗಮನಕ್ಕೆ ತರಬೇಕು ಎಂದು ತಿಳಿಸಿದರು,

**ಶಾಲೆ ಅಂಗನವಾಡಿಗಳಲ್ಲಿ ಶುದ್ಧ ಕುಡಿಯುವ ನೀರಿಗೆ ಆದ್ಯತೆ ನೀಡಿ:**

ಜಿಲ್ಲೆಯಲ್ಲಿರುವ ಎಲ್ಲಾ ಸರ್ಕಾರಿ ಶಾಲೆ, ಅಂಗನವಾಡಿ ಹಾಗೂ ವಸತಿನಿಲಯಗಳಲ್ಲಿ ಕಾಲಕಾಲಕ್ಕೆ ನೀರಿನ ಗುಣಮಟ್ಟವನ್ನು ಪರೀಕ್ಷಿಸಬೇಕು. ಅಡುಗೆಗೆ ಶುದ್ಧ ನೀರು ಪೂರೈಸುವ ಕಾರ್ಯವನ್ನು ಜವಾಬ್ದಾರಿಯುತವಾಗಿ ಮಾಡಬೇಕು. ಯಾವ ಶಾಲೆ, ಅಂಗನವಾಡಿ ಹಾಗೂ ವಸತಿನಿಲಯಗಳಲ್ಲಿ ನೀರಿನ ಕೊರತೆ ಇದೆ ಎಂಬುದನ್ನು ತಿಳಿದುಕೊಂಡು ಅದನ್ನು ಬಗೆಹರಿಸುವ ಕೆಲಸ ಮಾಡಬೇಕು. ಜಿಲ್ಲೆಯಲ್ಲಿ ಬತ್ತಿಹೋದ ಕೊಳವೆಬಾವಿಗಳ ಮಾಹಿತಿಯನ್ನು ಪಡೆದುಕೊಂಡು ಸ್ಥಳೀಯ ಸಂಸ್ಥೆಗಳ ಮೂಲಕ ಅಂತರ್ಜಲ ಮರುಪೂರಣ ಮಾಡುವ ಕಾರ್ಯವನ್ನು ಮಾಡಬೇಕು. ಜಲಜೀವನ್ ಮಿಷನ್ ಅಡಿಯಲ್ಲಿ ಶಾಲೆ, ಅಂಗನವಾಡಿ, ಹಾಸ್ಟೇಲ್ ಗಳಿಗೆ ಕುಡಿಯುವ ನೀರಿನ ಸಂಪರ್ಕ ಮಾಡಬೇಕು ಎಂದು ಸೂಚಿಸಿದರು.

**ಮಾನ್ಸೂನ್ ಪೂರ್ವ ತಯಾರಿ:**

ಎಲ್ಲಿಯೂ ಮಳೆಯ ನೀರು ನಿಲ್ಲದಂತೆ ಚರಂಡಿಗಳನ್ನು ಸ್ವಚ್ಚತೆ ಮಾಡಬೇಕು. ನಗರ ಹಾಗೂ ಹಳ್ಳಿಗಳಲ್ಲಿ ಫಾಗಿಂಗ್ ಮಾಡಿ ಸೊಳ್ಳೆಗಳ ನಿಯಂತ್ರಣ ಮಾಡಬೇಕು. ಎಲ್ಲಿಯೂ ನೀರು ನಿಲ್ಲದಂತೆ ನೋಡಿಕೊಂಡು ಕಾಲಾರ, ಮಲೇರಿಯಾದಂತಹ ರೋಗಗಳು ಹರಡದಂತೆ ಮುನ್ನೆಚ್ಚ-ರಿಕೆ ವಹಿಸಬೇಕು ಎಂದರು.

ನದಿ ದಂಡೆಯಲ್ಲಿರುವ ಜಿಲ್ಲೆಯ 118 ಗ್ರಾಮಗಳಲ್ಲಿ ಪ್ರವಾಹದಂತಹ ಪರಿಸ್ಥಿತಿಯನ್ನು ಎದುರಿಸಲು ವಿಫ'ತ್ತು ನಿರ್ವಹಣ ಯೋಜನೆಗಳನ್ನು ಅನುಷ್ಠಾನಗೊಳಿಸಲು ಸಿದ್ಧರಾಗಬೇಕು. ನುರಿತ ಈಜುಗಾರರು, ಹಗ್ಗ, ಏಣಿ, ದೋಣಿಗಳು, ಹಾಗೂ ವಿವಿಧ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಲು ಅಗ್ನಿಶಾಮಕದ ದಳ, ಪೊಲೀಸ್ ಸಿಬ್ಬಂದಿ, ರಕ್ಷಣಾ ಪಡೆಗಳು, ಹಾಗೂ ಸ್ಥಳೀಯ ಅಧಿಕಾರಿ ಸಿಬ್ಬಂದಿಗಳ ಹೆಸರು, ಸಂಪರ್ಕ ಸಂಖ್ಯೆಗಳ ಮಾಹಿತಿಯನ್ನು ನವೀಕರಿಸಿಕೊಳ್ಳಬೇಕು ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಋಷಿ ಆನಂದ ಸೇ-ರಿದಂತೆ, ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಸಿ ನೆಡುವ ಯೋಜನೆಗೆ ಡಿಸಿ ಟಿ.ಭೂ ಬಾಲನ್ ಚಾಲನೆ



**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲಾಡಳಿತ ಹಾಗೂ ಅರಣ್ಯ ಇಲಾಖೆ ಸಹಯೋಗದಲ್ಲಿ ಭೂತನಾಳ ಕೆರೆ ಸುತ್ತ ಮುತ್ತ ಹಾಗೂ ಬಿ ಡಿ ಎ ಗಾರ್ಡನ್ ಮೂರು ಹೆಕ್ಟೇರ್ ಪ್ರದೇಶದಲ್ಲಿ ಡಿಸ್ಟ್ರಿಕ್ಟ್ ಮೀನಿರಲ್ ಫಂಡ್(ಡಿಎಮ್‌ಎಫ್) ಯೋಜನೆಯಲ್ಲಿ 900 ಎತ್ತರದ ಸಸಿಗಳನ್ನು ನೆಡುವ ಯೋಜನೆಗೆ ಜಿಲ್ಲಾಧಿಕಾರಿ ಟಿ. ಭೂ ಬಾಲನ್ ಅವರು ಶುಕ್ರವಾರ ಚಾಲನೆ ನೀಡಿದರು.

ಡಿ ಎಫ್ ಒ ಶಿವಶರಣ ಹಿರೇಮಠ ಹಾಗೂ ಅರಣ್ಯ ಇಲಾಖೆ ಇತರೆ ಅಧಿಕಾರಿ ಮತ್ತು ಸಿಬ್ಬಂದಿ ಇದ್ದರು.

ಉದಯರಶ್ಮಿ
ಪ್ರತಿ ಮನೆ-ಮನದ ಸಂಗಾತಿ

# ಅದ್ವಿತೀಯ ಸೇನಾನಾಯಕ ಸ್ಯಾಮ್ ಮಾಣೆಕ್ ಶಾ

**ಉದಯರಶ್ಮಿ ದಿನಪತ್ರಿಕೆ**

**ವೀಣಾಂತರಂಗ**



-ವೀಣಾ ಎಚ್. ಪಾಟೀಲ್, ಮುಂಡರಗಿ

ಅದು 2ನೆಯ ವಿಶ್ವ ಯುದ್ಧದ ಸಮಯ. ಭಾರತದಲ್ಲಿ ಆಗ ಇದ್ದ ಬ್ರಿಟಿಷ್ ಮಿಲಿಟ-ರಿಯ ಗೋರ್ಖಾ ಪಡೆಯ ತುಕಡಿಯೊಂದರ ಮುಖ್ಯಸ್ಥನಾಗಿದ್ದ ಆ ವ್ಯಕ್ತಿ ಬರ್ಮಾದ ಗಡಿಯಲ್ಲಿರುವ ಸೇತುವೆಯನ್ನು ಜಪಾನಿ ಸೈನಿಕರಿಂದ ರಕ್ಷಿಸಲು ಸತತ ನಾಲ್ಕು ದಿನಗಳ ಕಾಲ ತನ್ನ ಸೈನ್ಯದ ತುಕಡಿಯೊಂದಿಗೆ ನಿದ್ರಾಹಾರಗಳಿಲ್ಲದೆ ಕಾರ್ಯ ನಿರ್ವಹಿಸಿದನು. ಮರಳಿ ಬರುತ್ತಿರುವಾಗ ತನ್ನ ಅರ್ಧಕ್ಕಿಂತ ಹೆಚ್ಚು ಸೈನಿಕರನ್ನು ತಮ್ಮದೇ ಬ್ರಿಟಿಷ್ ಮಿಲಿಟರಿ ವಾಯುಪಡೆಯ ವಿಮಾನಗಳ ದಾಳಿಗೆ ಗೊತ್ತಿಲ್ಲದೇ ಆದ ಅಚಾತುರ್ಯಕ್ಕೆ ಸಿಲುಕಿ ಮರಣ ಹೊಂದಿದರೂ, ಉಳಿದ ಸೈನ್ಯವನ್ನು ಹುರಿದುಂಬಿಸಿ ಯುದ್ಧಕ್ಕೆ ಸಜ್ಜು ಮಾಡುವ ಹೊಣೆಗಾ-ರಿಕೆಯನ್ನು ಆತನಿಗೆ ನೀಡಲಾಯಿತು. ತನ್ನ ಅತ್ಯದ್ಭುತ ವಾಕ್ಚರಿಯಿಂದ ಸೈನಿಕರನ್ನು ಹುರಿದುಂಬಿಸಿದ ಆತ ಮರುದಿನ ಮುಂಜಾನೆ ಯುದ್ಧಕ್ಕೆ ಸನ್ನದ್ಧರಾಗುತ್ತಿರುವ ಸಮಯದಲ್ಲಿ ಜಪಾನಿಯರು ಬುದ್ಧ ಪರ್ವತವನ್ನು ಏರುತ್ತಿದ್ದಾರೆ ಎಂಬ ಮಾಹಿತಿ ಆಧರಿಸಿ

ತನ್ನ ಸೇನೆಯವರಲ್ಲಿ ಉತ್ಸಾಹ ತುಂಬಿ ಮುನ್ನಡೆಯುತ್ತಿರುವಾಗ ಆತನ ಮೇಲೆ ಉಂಟಾದ ಹಠಾತ್ ದಾಳಿಯಲ್ಲಿ 9 ಗುಂಡುಗಳು ಆತನ ಶರೀರವನ್ನು ಹೊಕ್ಕವು. ವಿಪರೀತ ರಕ್ತಸ್ರಾವದಿಂದ ಬಳಲುತ್ತಿದ್ದರೂ ಕೂಡ ಆತ ತನ್ನ ಸೇನೆಯನ್ನು ಮುಂದೆ ಕಳುಹಿಸಿದ. ಆದರೆ ಆತನ ಬೆಂಗಾವಲುಗಾರ ದಲ್ವೀರ ಸಿಂಗ್ ಆತನನ್ನು ಹೊತ್ತು ಕ್ಯಾಂಪಿಗೆ ಮರಳಿ ಬಂದನು. ವಿಪರೀತ ರಕ್ತಸ್ರಾವಾಗಿದ್ದರೂ ವೈದ್ಯರ ಮಾತಿಗೆ ತಮಾಷೆಯ ಪ್ರತ್ಯುತ್ತರ ನೀಡಿದ ಆ ವ್ಯಕ್ತಿಯ ದೇಹವನ್ನು ಒಳಹೊಕ್ಕ ಗುಂಡುಗಳನ್ನು ತೆಗೆದು ಚಿಕಿತ್ಸೆ ನೀಡಲಾಯಿತು.

ಅಸಾಮಾನ್ಯ ಶೌರ್ಯವನ್ನು ತೋರಿದ್ದಕ್ಕೆ ಆತನಿಗೆ ಮಿಲಿಟರಿ ಕ್ರಾಸ್ ರಿಬ್ಬನ್ ಅನ್ನು ಗೌರವ ಪೂರ್ವಕವಾಗಿ ನೀಡಲಾಯಿತು. ಸುಮಾರು ನಾಲ್ಕು ದಶಕಗಳ ಕಾಲ ಸೇನೆಯ ಕಮಾಂಡರ್ ಇನ್ ಚೀಫ್ ಹುದ್ದೆಯಲ್ಲಿದ್ದುಕೊಂಡು,ಕಾಲಿಗೆ ಚಕ್ರ ಕಟ್ಟಿಕೊಂಡವರಂತೆ ತನ್ನ ಸೈನಿಕರನ್ನು ಹುರಿದುಂಬಿಸುತ್ತಾ, ಅವರಲ್ಲಿ ನೈತಿಕ ಮೌಲ್ಯಗಳನ್ನು ಬಿತ್ತುತ್ತಾ, ಮಿಲಿಟರಿ ಸಹೋದರರನ್ನು ಮಕ್ಕಳಂತೆ ಪೋಷಿಸುತ್ತಾ, ಮಿಲಿಟರಿ ಯೋಧರ ಘನತೆಯನ್ನು ಎತ್ತಿ ಹಿಡಿಯುತ್ತ ದೇಶದ ಮೂರು ಪಡೆಗಳಾದ ಭೂಸೇನೆ, ನೌಕಾ ಸೇನೆ ಮತ್ತು ವಾಯುಪಡೆಗಳ ಮುಖ್ಯಸ್ಥನಾಗಿ ಅಂತಿಮವಾಗಿ ಫೀಲ್ಡ್ ಮಾರ್ಷಲ್ ಆಗಿ ಕಾರ್ಯನಿರ್ವಹಿಸಿದ ಆ ವ್ಯಕ್ತಿಯೇ ಸ್ಯಾಮ್ ಹರ್ಮೋಸಜಿ ಫ್ರಾಮಜಿ ಜಮಶೇಡ್ ಜಿ ಮಾಣೆಕ್ ಶಾ.

ತಂದೆ ಮಿಲಿಟರಿ ವೈದ್ಯರು, ತಾಯಿ ಗೃಹಿಣಿ. ಅಮೃತಸರದಲ್ಲಿ 1914ರಲ್ಲಿ ಜನಿಸಿದ ಸ್ಯಾಮ್ ತಮ್ಮ 18ನೇ ವಯಸ್ಸಿನಲ್ಲಿ ಇಂಡಿಯನ್ ಮಿಲಿಟರಿ ಅಕಾಡೆಮಿಯ ಮೊದಲ ಬ್ಯಾಚ್ ನ 40 ಜನ ವಿದ್ಯಾರ್ಥಿಗಳಲ್ಲಿ ಒಬ್ಬರಾಗಿ ತೇರ್ಗಡೆ ಹೊಂದಿ ತರಬೇತಿ ಪಡೆದರು. ಬ್ರಿಟಿಷರ ಅಧೀನದಲ್ಲಿದ್ದ ಇಂಡಿಯನ್ ಮಿಲಿಟರಿ ಅಕಾಡೆಮಿಯ ಶಿಸ್ತಿನ ವಾತಾವರಣ ಓರ್ವ ಅತ್ಯದ್ಭುತ ಸೇನಾ ನಾಯಕನನ್ನು ಸೃಷ್ಟಿಸಿತು ಎಂದರೆ ತಪ್ಪಿಲ್ಲ. ತಮ್ಮ ಅದ್ಭುತ ದೇಹಸೌಷ್ಟವ, ಆಕರ್ಷಕ ಮಾತು ಮತ್ತು ಜೋವಿಯಲ್ ನಡವಳಿಕೆಯಿಂದ ಎಲ್ಲರನ್ನು ಆಕರ್ಷಿಸುತ್ತಿದ್ದ ಸ್ಯಾಮ್ ತಮ್ಮ ಸಹೋದ್ಯೋಗಿಗಳೊಂದಿಗೆ ಉತ್ತಮ ಸಂಬಂಧವನ್ನು ಹೊಂದಿದ್ದರು. 1937 ರಲ್ಲಿ ಪರಿಚಯವಾದ ಸಿಲ್ಲೋ ಎಂಬ ಮಹಿಳೆಯನ್ನು 1939ರಲ್ಲಿ ವಿವಾಹವಾಗಿ ಇಬ್ಬರು ಹೆಣ್ಣು ಮಕ್ಕಳನ್ನು ಪಡೆದಿದ್ದರು.

1947ರಲ್ಲಿ ಭಾರತಕ್ಕೆ ಸ್ವಾತಂತ್ರ್ಯ ಸಿಕ್ಕಾಗ ಸ್ಯಾಮ್ ಭಾರತೀಯ ಸೇನೆಯನ್ನು ಆಯ್ದುಕೊಂಡರೆ ಅವರ ಅತ್ಯಾಪ್ತ ಸ್ನೇಹಿತ ಯಾಹ್ಯಾಖಾನ್ ಪಾಕಿಸ್ತಾನಿ ಸೇನೆಯನ್ನು ಸೇ-ರಿದನು.ಸ್ಯಾಮ್ ಬಹದ್ದೂರ್ ಸ್ವತಂತ್ರ ಭಾರತದ ಒಟ್ಟು ಐದು ಯುದ್ಧಗಳಲ್ಲಿ ಎರಡನೇ ವಿಶ್ವ ಯುದ್ಧದಲ್ಲಿ ಬ್ರಿಟಿಷರ ಪರವಾಗಿ, 1947 ರಲ್ಲಿ ಭಾರತ ಮತ್ತು ಪಾಕಿಸ್ತಾನದ ನಡುವಿನ ಗಡಿ ಸಮಸ್ಯೆಯ ಸಮಯದಲ್ಲಿ,



1962ರಲ್ಲಿ ಇಂಡೋ ಸೈನೋ ಯುದ್ಧದಲ್ಲಿ 1965ರಲ್ಲಿ ಚೀನಿಯರ ಜೊತೆಗಿನ ಯುದ್ಧದಲ್ಲಿ ಮತ್ತು 1971ರಲ್ಲಿ ಬಾಂಗ್ಲಾ ವಿಮೋಚನೆಯ ಸಲುವಾಗಿನ ಪಾಕಿಸ್ತಾನದೊಂದಿಗಿನ ಯುದ್ಧಗಳಲ್ಲಿ ಭಾಗವಹಿಸಿದ ವ್ಯಕ್ತಿಯಾಗಿದ್ದಾರೆ. ಸುಮಾರು ನಾಲ್ಕು ದಶಕಗಳ ಕಾಲ ಭಾರತೀಯ ಕಮಾಂಡರ್ ಇನ್ ಚೀಫ್ ಹುದ್ದೆಯಲ್ಲಿ ಕಾರ್ಯನಿರ್ವಹಿಸಿದರು. ಭಾರತೀಯ ಮಿಲಿಟರಿ ಪಡೆಯ ಸರ್ವೋಚ್ಚ ನಾಯಕರ ಐದು ನಕ್ಷತ್ರಗಳನ್ನು ತಮ್ಮ ಭುಜದ ಮೇಲೆ ಹೊತ್ತವರು ಸ್ಯಾಮ್.

ತಮ್ಮ ಕಾರ್ಯದಕ್ಷತೆ, ಪ್ರಾಮಾಣಿಕತೆ ಮತ್ತು ನಿಷ್ಟೆಗೆ ಹೆಸರಾಗಿದ್ದ ಸ್ಯಾಮ್ ಅವರು ಹಲವಾರು ವರ್ಷಗಳ ಕಾಲ ತಮಿಳುನಾಡಿನ ವೆಲ್ಲಿಂಗ್ಟನ್ ನಲ್ಲಿರುವ ಸೇನಾ ತರಬೇತು ಶಾಲೆಯ ಮುಖ್ಯಸ್ಥರಾಗಿ ಕಾರ್ಯನಿರ್ವಹಿಸಿದರು. ಆ ಸಮಯದಲ್ಲಿ ಅವರ ಸಹೋದ್ಯೋಗಿ ಕೌಲ್ ರ ಕುತಂತ್ರದ ಪರಿಣಾಮವಾಗಿ ಸ್ಯಾಮ್ ಅವರು ಭಾರತೀಯ ರಕ್ಷಣಾ ಇಲಾಖೆಯು ನಡೆಸುವ ಕೋರ್ಟ್ ವಿಚಾರಣೆಯನ್ನು ಎದುರಿಸಬೇಕಾಯಿತು. ಆದರೆ ತುಸು ಜೋವಿಯಲ್ ಆದ-',ಆದರೆ ತಮ್ಮ ಕೆಲಸದ ವಿಷಯದಲ್ಲಿ ಅತ್ಯಂತ ನಿಷ್ಠಾವಂತರೂ ಪ್ರಾಮಾಣಿಕರೂ ಆಗಿದ್ದ ಸ್ಯಾಮ್ ನಿರಾತಂಕಿತರಾಗಿದ್ದರು. ಅವರ ಮೇಲೆ ಹೊರಿಸಿದ ಎಲ್ಲಾ ಅಪವಾದಗಳು ನಿರಾಧಾರವೆಂದು ಸಾಬೀತಾಯಿತು.

ಸೇನೆಯ ಜವಾನರನ್ನು ಕಟ್ಟಡ ನಿರ್ಮಾಣ ಕಾಮಗಾರಿಗಳಲ್ಲಿ ಬಳಸಿಕೊಳ್ಳುವುದನ್ನು ಅವರು ವಿರೋಧಿಸುತ್ತಿದ್ದರು. ಸೇನೆಯ ಎಲ್ಲಾ ಸೈನಿಕರು ತಮ್ಮ ತಮ್ಮ ಕರ್ತವ್ಯಗಳಲ್ಲಿ ಬದ್ಧರಾಗಿಯೂ ಉನ್ನತ ದೇಶ ಪ್ರೇಮಿಗಳಾಗಿಯೂ ನಿಷ್ಠೆಯಿಂದ



ಕಾರ್ಯನಿರ್ವಹಿಸಲು ಎಲ್ಲ ರೀತಿಯ ನೆರವು ನೀಡುತ್ತಿದ್ದ ಅವರು ಸೈನಿಕರ ಮೇಲೆ ಆಗುವ ತೇಜೋವಧೆಗಳನ್ನು ಖಂಡಿಸುತ್ತಿದ್ದರು. ಇದು ಅಧಿಕಾರ ವರ್ಗಕ್ಕೆ ನುಂಗಲಾರದ ತುತ್ತಾಗಿತ್ತು.

1947ರ ಭಾರತ ಸ್ವತಂತ್ರದ ನಂತರ ಕಾಶ್ಮೀರದ ಮಹಾರಾಜ ಹರಿ ಸಿಂಗ್ ಅವರನ್ನು ಸುರಕ್ಷಿತವಾಗಿ ಕರೆತರುವಲ್ಲಿ ಪ್ರಮುಖ ಪಾತ್ರ ವಹಿಸಿದವರು ಸ್ಯಾಮ್. ತಮ್ಮನ್ನು ಕಾಪಾಡಲು ತಡವಾಗಿ ಆಗಮಿಸಿದರು ಎಂದು ಭಾರತ ಸರ್ಕಾರದ ಪ್ರತಿನಿಧಿಯಾಗಿ ವಿ.ಕೆ. ಮೆನನ್ ರವರ ಮೇಲೆ ಅಸಹನೆ ವ್ಯಕ್ತಪಡಿಸಿದ ಕಾಶ್ಮೀರದ ಮಹಾರಾಜನಿಗೆ ತಕ್ಕ ಪ್ರತ್ಯುತ್ತರ ನೀಡಿದರೂ ನಂತರ ಅವರನ್ನು ಸುರಕ್ಷಿತವಾಗಿ ವಿಮಾನದಲ್ಲಿ ದೆಹಲಿಗೆ ಕರೆ ತಂದವರು ಸ್ಯಾಮ್.

ಪಂಜಾಬಿನ ಗೂರ್ಖ ರೆಜಿಮೆಂಟಿನ ಸಿಪಾಯಿಗಳಿಂದ ಬಹದ್ದೂರ್ ಎಂಬ ಬಿರುದನ್ನು ಪಡೆದವರು ಸ್ಯಾಮ್.

1963 ರಲ್ಲಿ ನೆಹರು ಅವರು ಚೀನಾ ಯುದ್ಧದಲ್ಲಿ ಸೋಲುವ ಸಮಯದಲ್ಲಿ ಹತಾಶರಾಗಿ ಮಾತನಾಡಿದ್ದನ್ನು ಖಂಡಿಸಿದವರು ಸ್ಯಾಮ್. ದೇಶದ ಪ್ರಧಾನಿಯೇ ಹತಾಶನಾದರೆ ದೇಶದ ಪ್ರಜೆಗಳ ಗತಿ ಏನು? ಎಂಬುದು ಅವರ ವಾದವಾಗಿತ್ತು. ಮುಂದೆ ನೆಹರು ಅವರೊಂದಿಗೆ ರಕ್ಷಣಾ ಕಾರ್ಯಾಚರಣೆಯ ಕುರಿತಾದ ಮಾತುಕತೆಯ ಸಮಯದಲ್ಲಿ ಪರಿಚಯವಾದ ಇಂದಿರಾ ಗಾಂಧಿಯವರ ವಿಶ್ವಾಸಕ್ಕೆ ಪಾತ್ರರಾದರು ಸ್ಯಾಮ್ ತಪ್ಪು ಕಂಡು ಬಂದಾಗ ನಿಷ್ಠುರವಾಗಿ ಹೇಳಲು ಕೂಡ ಸಿದ್ದ ಎಂಬುದನ್ನು ಸಾಬೀತುಪಡಿಸಿದರು.

1964 ರಲ್ಲಿ ಇಂದಿರಾ ಗಾಂಧಿಯವರು ಪ್ರಧಾನಿಯಾಗಿದ್ದಾಗ ಭಾರತ ದೇಶದ ರಕ್ಷಣಾ ವ್ಯವಸ್ಥೆಯ ಮೂರೂ ಒಕ್ಕೂಟಗಳ ಕಮಾಂಡರ್ ಇನ್ ಚೀಫ್ ಎಂದು ನಿಯುಕ್ತರಾದರು. ಕೆಲಸದ ವಿಷಯದಲ್ಲಿ ಎಂದೂ ರಾಜಿ ಮಾಡಿಕೊಳ್ಳದ ಸ್ಯಾಮ್ ಕಾರ್ಯನಿಮಿತ್ತ ಪ್ರಧಾನಿ ಕಾರ್ಯಾಲಯವು ಏರ್ಪಡಿಸುವ ಔತಣಕೂಟಗಳಲ್ಲಿ ಸೈನಿಕರ ಪರವಾಗಿ ತಮ್ಮ ಅಹವಾಲುಗಳನ್ನು ಪ್ರಧಾನಿಯವರಿಗೆ ಸಲ್ಲಿಸಿ ಸೈನಿಕರ ನಿವೃತ್ತಿ ವೇತನ ಮತ್ತಿತರ ಹಲವಾರು ಸಮಸ್ಯೆಗಳನ್ನು ಪರಿಹರಿಸಿದರು. ಯುದ್ಧವನ್ನು ಕೇವಲ ಮೈದಾನದಲ್ಲಿ ಮಾತ್ರ ಮಾಡುವುದಲ್ಲ, ಔತಣ ಕೂಟಗಳಲ್ಲಿಯೂ ಇದು ಸಾಧ್ಯವಾಗುತ್ತದೆ ಎಂದು ಅವರು ಪ್ರತಿಪಾದಿಸುತ್ತಿದ್ದರು.

ಮುಂದೆ 1971ರಲ್ಲಿ ಬಾಂಗ್ಲಾ ವಿಮೋಚನೆಯ ಕು-ರಿತು ಪ್ರಧಾನಿಯವರು ಉಪ ಪ್ರಧಾನಿ, ರಕ್ಷಣಾ ಸಚಿವ ಮತ್ತು ಮಿಲಿಟರಿ ಮುಖ್ಯಸ್ಥರ ಜೊತೆಗಿನ ಮಾತುಕತೆಯಲ್ಲಿ ಪೂರ್ವ ಪಾಕಿಸ್ತಾನದ ಪರವಾಗಿ ಪಶ್ಚಿಮ ಪಾಕಿಸ್ತಾನದೊಂದಿಗೆ ಯುದ್ಧ ಮಾಡಲು ಸಭೆ ಕರೆದರು. ಆ ಸಭೆಯಲ್ಲಿ ಅತ್ಯಂತ ಕರಾರುವಾಕ್ಕಾಗಿ ಅಕಸ್ಮಾತ್ ಈ ಸಮಯದಲ್ಲಿ ನಾವು ಯುದ್ಧವನ್ನು ಆರಂಭಿಸಿದರೆ ಈ ಯುದ್ಧದಲ್ಲಿ ನಾವು ಖಂಡಿತವಾಗಿಯೂ ಸೋಲುತ್ತೇವೆ, ಸೇನಾ ನಾಯಕನಾಗಿ ನಾನು ಇದಕ್ಕೆ ತಯಾರಿಲ್ಲ ಅಷ್ಟಾಗಿಯೂ ನೀವು ಯುದ್ಧ ನಡೆಯಲೇಬೇಕು ಎಂದು ಆಗ್ರಹಿಸಿದರೆ ನಾನು ಸೇನಾ ನಾಯಕನ ಹುದ್ದೆಗೆ ರಾಜೀನಾಮೆ ನೀಡುತ್ತೇನೆ ಎಂದು ಹೇಳಿದರು. ಅವರ ಮಾತನ್ನು ಗಂಭೀರವಾಗಿ ಪರಿಣಮಿಸಿದ ಪ್ರಧಾನಿ ಇಂದಿರಾ ಗಾಂಧಿ ಅವರಿಗೆ ನೈಜ ಕಾರಣವನ್ನು ನೀಡಲು ಹೇಳಿದಾಗ ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ವಿಪರೀತ ಬಿಸಿಲಿನ ಕಾರಣ ಹಿಮ ಕರಗಿ ನದಿಗಳಲ್ಲಿ ನೀರಿನ ಹರಿವಿನ ಪ್ರಮಾಣ ಹೆಚ್ಚಾಗಿ ನದಿಗಳು ಅಡ್ಡಾದಿಡ್ಡಿ ಉಕ್ಕಿ ಹ-ರಿಯುತ್ತವೆ. ನಂತರ ಬರುವ ಮಳೆಗಾಲದಲ್ಲಿ ಕೂಡ ಈ ತೊಂದರೆ ಮುಂದುವರೆಯುತ್ತದೆ. ಅದೂ ಅಲ್ಲದೆ ನಮ್ಮ ಸೈನಿಕರನ್ನು ಏಕಾಏಕಿ ಯುದ್ಧಕ್ಕಿಳಸಿದರೆ 1965 ರಂತೆ ಮತ್ತೆ ಸೋಲಾಗುವುದು ಖಂಡಿತ. ಅದರ ಬದಲಾಗಿ ಡಿಸೆಂಬರ್ ನಲ್ಲಿ ಪೂರ್ವ ಪಾಕಿಸ್ತಾನದ ಮೇಲೆ ದಾಳಿ ಮಾಡಿ ಅಲ್ಲಿ ಇರುವ ಪಾಕಿಸ್ತಾನಿ ಸೈನಿಕರನ್ನು ಹೊರಗಟ್ಟಿ ಅಲ್ಲಿಯ ಬಾಂಗ್ಲಾ ಜನರನ್ನು ರಕ್ಷಿಸಬಹುದು ಎಂದು ಸಲಹೆ ನೀಡಿದರು. ಸಮಯೋಚಿತವಾದ ಈ ಸಲಹೆಯನ್ನು ಒಪ್ಪಿದ ಪ್ರಧಾನಿ ಇಂದಿರಾ ವಾರ್ ರೂಂ ಸಿದ್ದಪಡಿಸಿ ಯುದ್ಧಕ್ಕೆ ತಯಾರಿ ನಡೆಸಲು ಮೌಖಿಕ ಆದೇಶ ನೀಡಿದರು. ಅಂತೆಯೇ ಸ್ಯಾಮ್ ತಮ್ಮ ಮೂರು ದಳಗಳ ಮುಖ್ಯಸ್ಥರೊಂದಿಗೆ ಚರ್ಚಿಸುತ್ತಾ ಸುಮಾರು ಆರು ತಿಂಗಳ ಕಾಲ ಸೇನೆಯನ್ನು ಸನ್ನದ್ಧಗೊಳಿಸಿದರು. ಸ್ಯಾಮ್ ಹೇಳಿದಂತೆ ಡಿಸೆಂಬರ್ 4 ರಂದು ಪಾಕಿಸ್ತಾನವು ಭಾರತದ ಮೇಲೆ ಯುದ್ಧ ಘೋಷಣೆ ಮಾಡಿತು. ಇದಕ್ಕಾಗಿಯೇ ಕಾದಿದ್ದ ಭಾರತೀಯ ಸೈನ್ಯ ಕೆಲವೇ ದಿನಗಳಲ್ಲಿ ಪೂರ್ವ ಪಾಕಿಸ್ತಾನದ ಮೇಲೆ ದಾಳಿ ಮಾಡಿ ಅಲ್ಲಿನ ಪಶ್ಚಿಮ ಪಾಕಿಸ್ತಾನಿ ಸೈನಿಕರನ್ನು ಸೋಲಿಸಿ ಸ್ವತಂತ್ರ ಬಾಂಗ್ಲಾ ದೇಶದ ಉದಯಕ್ಕೆ ಕಾರಣರಾದರು.

ಈ ಯುದ್ಧದ ನಂತರ ನಡೆದ ಸಂದರ್ಶನದಲ್ಲಿ ಸೇನಾ ಮುಖ್ಯಸ್ಥರಾದ ಸ್ಯಾಮ್ ಬಹದ್ದೂರ್ ತಮಾಶೆಯಾಗಿ ಮಾತನಾಡಿದ ಮಾತುಗಳು ಆಗ ಹೆಚ್ಚು ಪ್ರಚಲಿತವಾಗಿದ್ದವು.

ತಮ್ಮ ಅದ್ಭುತ ಶೌರ್ಯ ಪ್ರದರ್ಶನಕ್ಕಾಗಿ 1968ರಲ್ಲಿ ಪದ್ಮಭೂಷಣ ಪ್ರಶಸ್ತಿ, 1972 ರಲ್ಲಿ ಪದ್ಮವಿಭೂಷಣ ಪ್ರಶಸ್ತಿ ಪುರಸ್ಕೃತರಾದ ಸ್ಯಾಮ್ ಮುಂದೆ ತಾವು ನಿವೃತ್ತಿಯಾಗುವ ಕೇವಲ 15 ದಿನಗಳ ಮುಂಚೆ 1973 ಜನವರಿ 15ರಂದು ಫೀಲ್ಡ್ ಮಾರ್ಷಲ್ ಆಗಿ ಅಧಿಕಾರ ಸ್ವೀಕರಿಸಿದರು.ಸ್ಯಾಮ್ ಅದೇ ವರ್ಷದ ಜನವರಿ 26ರಂದು ನಡೆದ ಗಣರಾಜ್ಯೋತ್ಸವದಲ್ಲಿ ಫೀಲ್ಡ್ ಮಾರ್ಷಲ್ ಆಗಿ ಭಾಗವಹಿಸಿ ಅದೇ ತಿಂಗಳ 31ರಂದು ಸೇನೆಯಿಂದ ನಿವೃತ್ತರಾದರು ಸ್ಯಾಮ್ ಮಾಣೆಕ್ ಶಾ. ಭಾರತೀಯ ಸೇನೆಯ ಐದು ನಕ್ಷತ್ರಗಳನ್ನು ಹೊಂದಿದ ಅಧಿಕಾ-ರಿಯಾಗಿದ್ದರಿಂದ ಸೇನೆಯಿಂದ ನಿವೃತ್ತಿ ಹೊಂದಿದರೂ ತಮ್ಮ ಜೀವಿತದ ಕೊನೆಯವರೆಗೂ ಆ ಪದವಿಯನ್ನು ಹೊಂದಿರುವ ವ್ಯಕ್ತಿಯಾಗಿ ದೇಶದ ಸರ್ವೋಚ್ಚ ನಾಯಕ ಎನಿಸಿಕೊಂಡರು.


ಸ್ಯಾಮ್ ಅವರ ಸೇನಾ ಬದುಕಿನ ಹಲವಾರು ರೋಚಕ ಕಥಾನಕಗಳನ್ನು ನಾವು ಕೇಳಿದ್ದೇವೆ.



ಭಾರತೀಯ ಸೇನೆಯೆಡೆಗಿನ ಅವರ ಶ್ರದ್ಧೆ,ನಿಷ್ಠೆ,ಪ್ರಾಮಾಣಿಕತೆ ಮತ್ತು ದೇಶಭಕ್ತಿಯ ಜೊತೆ ಜೊತೆಗೆ ಅವರು ತಮ್ಮ ಸೈನಿಕರನ್ನು ಹು-ರಿದುಂಬಿಸಿ ಸಜ್ಜು ಮಾಡುತ್ತಿದ್ದ ರೀತಿ ಇಂದಿಗೂ ಮನೆ ಮಾತಾಗಿವೆ.

2008ರಲ್ಲಿ ವಯೋ ಸಹಜವಾಗಿ ನಿಮೋನಿಯಾ ಕಾಯಿಲೆಗೆ ತುತ್ತಾದ ಜನರಲ್ ಸ್ಯಾಮ್ ಮರಣ ಹೊಂದಿದರು. ಒಂದು ಅದ್ಭುತ ವ್ಯಕ್ತಿತ್ವದ ಸ್ಯಾಮ್ ತನ್ನ ಜೀವಿತದ ಕೊನೆಯಲ್ಲಿ ಅವರು ಯಾವಾಗಲೂ ಹೇಳುತ್ತಿದ್ದ ಮಾತೇ ಆಗಿತ್ತು ಅದು ... ಐ ಯಾಮ್ ಓಕೇ.

ಅಂತಹ ಅದ್ಭುತ ಸೇನಾನಿಗೆ ನಮ್ಮ ಕೋಟಿ ಕೋಟಿ ನಮನಗಳು.. ಜೈ ಹಿಂದ್



### ಜನನ-ಮರಣ ಉಪನೋಂದಣಾಧಿಕಾರಿಗಳ ಸಭೆಯಲ್ಲಿ ಜಿಪಂ ಮುಖ್ಯ ಯೋಜನಾಧಿಕಾರಿ ನಿಂಗಪ್ಪ ಗೋಠೆ ಸೂಚನೆ

# ಜನನ ಮರಣ ಮತ್ತು ನಿರ್ಜೀವ ಜನನಗಳ ನೋಂದಣಿ ಕಡ್ಡಾಯ

**ಉದಯರಶ್ಮಿ ನ್ಯೂಸ್**



ವಿಜಯಪುರ: ಜನನ ಮರಣಗಳ ನೋಂದಣಿ ಅಧಿನಿಯಮ 1969ರಂತೆ ಜನನ ಮರಣ ಮತ್ತು ನಿರ್ಜೀವ ಜನನಗಳ ನೋಂದಣಿ ಕಡ್ಡಾಯವಾಗಿದ್ದು, ಇಂತಹ ಘಟನೆಗಳು ಸಂಭವಿಸಿದ ಸ್ಥಳದಲ್ಲಿಯೇ ನೋಂದಣಿ ಮಾಡಲಾಗುವುದು ಎಂದು ಜಿಲ್ಲಾ ಪಂಚಾಯತಿ ಮುಖ್ಯ ಯೋಜನಾಧಿಕಾರಿ ನಿಂಗಪ್ಪ ಗೋಠೆ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ವಿಜಯಪುರ ಹಾಗೂ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಛೇರಿ ವಿಜಯಪುರ ಇವರ ಸಹಯೋಗದಲ್ಲಿ ಜಿಲ್ಲಾ ಪಂಚಾಯತಿಯ ಸಭಾ ಭವನದಲ್ಲಿ ಗುರುವಾರ ನಡೆದ ಜನನ-ಮರಣ ಉಪನೋಂದಣಾಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು ಗ್ರಾಮ ಪಂಚಾಯತಿ ಕಾರ್ಯದರ್ಶಿ ಹಾಗೂ ಡಿ.ಇ.ಓ ರವರಿಗೆ ಜಿಲ್ಲಾ ಮಟ್ಟದ ತರಬೇತಿಯನ್ನು ಹಮ್ಮಿಕೊಳ್ಳಲಾಗಿದ್ದು ಇದರ ಸದುಪೋಗವನ್ನು ಪಡೆದುಕೊಳ್ಳಬೇಕು ಎಂದರು.

ರಾಜ್ಯದಲ್ಲಿ ಜನನ ಮರಣಗಳ ನೋಂದಣಿ ಪ್ರಕ್ರಿಯೆಯನ್ನು ಕಾರ್ಯಗತಗೊಳಿಸಲು ನೋಂದಣಿ ಕಾರ್ಯದಲ್ಲಿ ನಿರತರಾಗಿರುವ ನೋಂದಣಿ ಅಧಿಕಾರಿಗಳಿಗೆ ಸಿಬ್ಬಂದಿಗಳಿಗೆ ಕಾಲಕಾಲಕ್ಕೆ ಅಧಿನಿಯಮ ಮತ್ತು ನಿಯಮಗಳ ಉಪಬಂಧಗಳ ಪೂರ್ಣವಾದ ಅರಿವು ಮೂಡಿಸುವುದು ಅವಶ್ಯಕವಾಗಿರುತ್ತದೆ ನೋಂದಣಿ ಪದ್ಧತಿ ಅಡಿ ಕಾರ್ಯ ನಿರ್ವಹಿಸುವ ಎಲ್ಲ ಸಿಬ್ಬಂದಿಗಳಿಗೆ ಅವರ ಪಾತ್ರ ಮತ್ತು ಜವಾಬ್ದಾರಿಗಳನ್ನು ತಿಳಿಸಲು ಹಾಗೂ ಅವರು ನೋಂದಣಿ ಕಾರ್ಯವನ್ನು ನಿರ್ವಹಿಸಲು ಸಹಾಯಕವಾಗುವಂತೆ ಮಾರ್ಗದರ್ಶನ ನೀಡುವ ಸಲುವಾಗಿ ಈ ತರಬೇತಿಯು ಅವಶ್ಯಕವಾಗಿದೆ ಆದ್ದರಿಂದ ಎಲ್ಲರೂ ಈ ಕರ್ತವ್ಯವನ್ನು ಅತ್ಯಂತ ಜವಾಬ್ದಾರಿಯಿಂದ ನಿರ್ವಹಿಸಬೇಕೆಂದು ಹೇಳಿದರು.

ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿ ಬಿ. ಎಸ್ ಮೂಗನೂರಮಠ ಮಾತನಾಡಿ, ಜನನ ಮರಣಗಳ ನೋಂದಣಿ ಕಾರ್ಯದ ಅಧಿನಿಯಮ ಮತ್ತು ನಿಯಮಗಳ ಉಪಬಂಧಗಳ ಪೂರ್ಣವಾದ ಅರಿವು ಮೂಡಿಸುವುದು ಈ ತರಬೇತಿಯ ಉದ್ದೇಶ ಎಂದು ತಿಳಿಸಿದರು.

ಈ ವೇಳೆ ವಿಜಯಪುರ ಜಿಲ್ಲೆಯ ಅಂಕಿ-ಅಂಶಗಳನೋಟ 2022-23ರ ಪುಸ್ತಕಗಳನ್ನು ಬಿಡುಗಡೆ ಮಾಡಲಾಯಿತು

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿಯ ಯೋಜನಾ ಅಂದಾಜು ಮತ್ತು ಮೌಲ್ಯಮಾಪನಾಧಿಕಾರಿ ಎ. ಬಿ ಅಲ್ಲಾಪೂರ, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಛೇರಿ ಸಹಾಯಕ ನಿರ್ದೇಶಕ ಎ. ಬಿ ಮನಿಯಾರ, ಮುದ್ದೇಬಿಹಾಳ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಎಸ್ ಕಲ್ಮನಿ, ನಿಡಗುಂದಿ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿ ವ್ಹಿ. ಎಸ್ ಹಿರೇಮಠ, ಕೊಲ್ಹಾರ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿ ರವಿಕುಮಾರ ಹುಕ್ಕೇರಿ, ಸಿಂದಗಿ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿ ಸುಬ್ರಮಣ್ಯ ಶರ್ಮಾ, ಆಲಮೇಲ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿ ಫರಿದಾ ಬಾನು ಪಠಾಣ, ಬಸವನ ಬಾಗೆವಾಡಿ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿ ಪ್ರಕಾಶ ದೇಸಾಯಿ, ಜಿಲ್ಲಾ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿ ಸಂಜೀವ ಜಿನ್ನೂರ, ಜಿಲ್ಲಾ ಪಂಚಾಯತಿಯ ಅಧಿಕಾರಿ ಹಾಗೂ ಸಿಬ್ಬಂದಿ, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿಯ ಸಿಬ್ಬಂದಿ, ಜಿಲ್ಲೆಯ ಎಲ್ಲ ತಾಲೂಕಿನ ತಾಲೂಕ ಯೋಜನಾಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಯವರು, ಡಿ.ಇ.ಓ ರವರು ಹಾಗೂ ಇತರರು ಉಪಸ್ಥಿತರಿದ್ದರು.

# ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ: ವಿವಿಧ ವೃತ್ತಿಪರ ಕೋರ್ಸಗೆ ಅರ್ಜಿ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ (ಓಅಗಿಖಿ) ಸಂಯೋಜನೆ ಹೊಂದಿದ 12 ವಿವಿಧ ವೃತ್ತಿಗಳಲ್ಲಿ ಪ್ರವೇಶಗಳು ಪ್ರಾರಂಭವಾಗಿವೆ. ಸಂಸ್ಥೆಯು ಸುಸಜ್ಜಿತ ಕಾರ್ಯಾಗಾರವನ್ನು ಹೊಂದಿದ್ದು, ಆಧುನಿಕ industry 4.0 ಅಡಿಯಲ್ಲಿ Tata Technologies Ltd, ಇವರ ಸಹಯೋಗದೊಂದಿಗೆ ಉತ್ತಮ ದರ್ಜೆ ತರಬೇತಿ ನೀಡಲಾಗುವುದು, ಹಾಗೂ ತರಬೇತಿಯನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ಉದ್ಯೋಗ ಭರವಸೆ ನೀಡಲಾಗುವುದು. ಪ್ರವೇಶಕ್ಕೆ ವಾರ್ಷಿಕವಾಗಿ 1,200 ರೂ ಶುಲ್ಕವನ್ನು ಪಡೆದುಕೊಳ್ಳಲಾಗುವುದು. ಎಸ್‌ಎಸ್‌ಎಲ್‌ಸಿ ಹಾಗೂ 8ನೇ ತರಗತಿ ಪಾಸಾದ ಅಭ್ಯರ್ಥಿಗಳು ಪ್ರವೇಶ ಹೊಂದಲು ಅರ್ಹರಿದ್ದು, www.cite.karnataka.gov.in ಇಲಾಖೆ ಜಾಲತಾಣದ ಮೂಲಕ ಮೇ 20 ರಿಂದ ಜೂನ್ 3ರವರೆಗೆ ಆನ್ ಲೈನ್ ಅರ್ಜಿ ಸಲ್ಲಿಸಬಹುದು ಒಟ್ಟು 470 ಸ್ಥಾನಗಳಿಗೆ ಪ್ರವೇಶ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ 9972682184, 9448986381, 9886437517 ಮತ್ತು 08352260360 ಗೆ ಸಂಪರ್ಕಿಸಬಹುದು ಎಂದು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 945 ಗಿಡಗಳನ್ನು ನೆಡುವ ಕಾರ್ಯಕ್ರಮಕ್ಕೆ ಚಾಲನೆ

**ಉದಯರಶ್ಮಿ ನ್ಯೂಸ್**



ಮುದ್ದೇಬಿಹಾಳ: ಈ ವರ್ಷ ಉತ್ತಮ ಮಳೆಯಾಗುವ ಮುನ್ಸೂಚನೆ ಇದ್ದು ಜಿಲ್ಲಾ ಪಂಚಾಯತ ಯೋಜನೆಯಡಿಯಲ್ಲಿ 3900 ಹಾಗೂ ರಾಜ್ಯ ಯೋಜನೆಯ ಅಡಿಯಲ್ಲಿ 4200 ಗಿಡಗಳನ್ನು ನೆಡಲಾಗುತ್ತದೆ ಎಂದು ತಾಲ್ಲೂಕು ಸಾಮಾಜಿಕ ವಲಯ ಅರಣ್ಯಾಧಿಕಾರಿ ಎಸ್.ಜಿ.ಸಂಗಾಲಕ ಹೇಳಿದರು.

ಶುಕ್ರವಾರ ತಾಲ್ಲೂಕಿನ ಬಿದರಕುಂದಿ ಗ್ರಾಮದ ಆರ್‌ಎಂ-ಎಸ್‌ಎ ಶಾಲೆ ಬಳಿ ಗುಡಿಹಾಳ ಗ್ರಾಮಕ್ಕೆ ಕೂಡುವ ರಸ್ತೆಯಲ್ಲಿ 945 ಗಿಡಗಳನ್ನು ನೆಡುವ ಕಾರ್ಯಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರತಿ ವರ್ಷದಂತೆ ರೈತರಿಗೆ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿಯಲ್ಲಿ ರಿಯಾಯಿತಿ ದರದಲ್ಲಿ ಶ್ರೀಗಂಧ, ರಕ್ತ ಚಂದನ, ಸಾಗವಾನಿ, ಮಹಾಗಣಿ, ಹೆಬ್ಬೇವು, ಸೀತಾಫಲ, ಕರಿಬೇವು, ಲಿಂಬೆ, ಪೇರಲ ಸೇರಿದಂತೆ 32 ವಿಧದ ಗಿಡಗಳನ್ನು ಮಾರಲಾಗುತ್ತಿದೆ. ರೈತರು ತಮ್ಮ ಆಧಾರ ಕಾರ್ಡ್, ಬ್ಯಾಂಕ್ ಪಾಸ್ ಬುಕ್ ಹಾಗೂ ಹೊಲದ ಉತಾರೆಯ ಜರಾಕ್ಸ ಪ್ರತಿಗಳನ್ನು ನೀಡಿ ಗಿಡಗಳನ್ನು ಕೇಸಾಪೂರ ಸಮೀಪದ ಸಸ್ಯ ಪಾಲನಾಲಯದಲ್ಲಿ ಪಡೆದುಕೊಳ್ಳಬಹುದು ಎಂದರು.

ಕಾರ್ಯಕ್ರಮದಲ್ಲಿ ಪ್ರಾದೇಶಿಕ ಅರಣ್ಯ ಇಲಾಖೆಯ ವಲಯ ಅರಣ್ಯಾಧಿಕಾರಿ ಬಸನಗೌಡ ಬಿರಾದಾರ, ಹಸಿರು ತೋರಣ ಗೆಳೆಯರ ಬಳಗದ ಅಧ್ಯಕ್ಷ ಡಾ.ವೀರೇಶ ಇಟಗಿ, ಕಾರ್ಯದರ್ಶಿ ಬಿ.ಎಚ್.ಬಳಬಟ್ಟಿ, ಮಾಜಿ ಅಧ್ಯಕ್ಷರಾದ ನಾಗಭೂಷಣ ನಾವದಗಿ, ಬಿ.ಎಸ್.ಮೇಟಿ, ಅಶೋಕ ರೇವಡಿ, ರಾಜಶೇಖರ ಕಲ್ಯಾಣಮಠ, ರವಿ ಗೂಳಿ, ಸಂಚಾಲಕ ಮಹಾಬಲೇಶ್ವರ ಗಡೇದ, ವಿ.ಎಸ್.ಪಾಟೀಲ, ಸುರೇಶ ಕಲಾಲ, ಸಂಜೀವ ಕಡೂರ, ಆದೇಶ ಕೋಳೂರ, ಅರಣ್ಯ ಇಲಾಖೆಯ ಅನಿಲ ರಾಠೋಡ, ಅನಿಲ ಚವ್ಹಾಣ, ಪರಮಾನಂದ ಪಾಟೀಲ, ಬಸವರಾಜ ಬ್ಯಾಕೋಡ, ನಿರ್ಮಲಾ ಸಿದ್ನಾಳ, ಶ್ರೀನಿಧಿ ಬಿರಾದಾರ ಇದ್ದರು. ಕೋಳೂರ ಗ್ರಾಮದ ಸಂತೋಷ ಹಿರೇಮಠ ಗಿಡಗಳನ್ನು ನೆಡುವಿಕೆಯ ಪೂಜಾ ವಿಧಿ ವಿಧಾನಗಳನ್ನು ನಡೆಸಿಕೊಟ್ಟರು.

# ಪ್ರವಚನ ಆಲಿಸುವದರಿಂದ ಜೀವನ ಪಾವನ :ಸಂಗನಬಸವ ಶ್ರೀ

**ಉದಯರಶ್ಮಿ ನ್ಯೂಸ್**




ಬಸವನಬಾಗೇವಾಡಿ: ಜೀವನದಲ್ಲಿ ಪುರಾಣ-ಪ್ರವಚನ ಕೇಳುವದರಿಂದ ಮನಸ್ಸು ಹಸನಾಗುತ್ತದೆ ಎಂದು ಮನಗೂಳಿ ಸಂಸ್ಥಾನ ಹಿರೇಮಠದ ಅಭಿನವ ಸಂಗನಬಸವ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ತಾಲೂಕಿನ ಮನಗೂಳಿ ಪಟ್ಟಣದ ಸಂಸ್ಥಾನ ಹಿರೇಮಠದಲ್ಲಿ ಗುರುವಾರ ಶತಾಯುಷಿ ಲಿಂ.ಸಂಗನಬಸವ ಶಿವಾಚಾರ್ಯ ಸ್ವಾಮೀಜಿಯವರ 41 ನೇ ಪುಣ್ಯಸ್ಮರಣೋತ್ಸವ ಹಾಗೂ 2008 ಜಗದ್ಗುರು ಲಿಂ.ಡಾ.ಮಹಾಂತ ಶಿವಾಚಾರ್ಯ ಸ್ವಾಮೀಜಿಯವರ ಜಾತ್ರಾಮಹೋತ್ಸವದಂಗವಾಗಿ 11 ದಿನಗಳ ಕಾಲ ಹಮ್ಮಿಕೊಂಡಿರುವ ಶಿವಶರಣೆ ಹೇಮರಡ್ಡಿ ಮಲ್ಲಮ್ಮಳ ಪುರಾಣ ಉದ್ಘಾಟನೆ ಕಾರ್ಯಕ್ರಮದ ಸಾನಿಧ್ಯ ವಹಿಸಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪುರಾಣ-ಪ್ರವಚನ ಕೇಳುವದರಿಂದ ಮನುಷ್ಯನಿಗೆ ಸಂಸ್ಕಾರ ತಿಳಿಯುತ್ತದೆ. ಸಂಸಾರದ ಜಂಜಾಟದಲ್ಲಿ ಪ್ರತಿನಿತ್ಯ ಚಿಂತೆ ಮಾಡುವದನ್ನು ಬಿಟ್ಟು ಪುರಾಣ-ಪ್ರವಚನಗಳು ನಡೆಯುವ ಸ್ಥಳಕ್ಕೆ ಹೋಗಿ ಅಲ್ಲಿನ ನಾಲ್ಕು ಹಿತ-ನುಡಿಗಳನ್ನು ಆಲಿಸುವದರಿಂದ ಜೀವನ ಹಸನಾಗುತ್ತದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ವ್ಹಿಡಿಸಿಸಿ ಬ್ಯಾಂಕಿನ ನಿರ್ದೇಶಕ ಚಂದ್ರಶೇಖರಗೌಡ ಪಾಟೀಲ ಮಾತನಾಡಿ, ಮನಗೂಳಿಯ ಸಂಸ್ಥಾನ ಹಿರೇಮಠವು ಜಿಲ್ಲೆಯಲ್ಲಿಯೇ ಅದರದೇ ಆದ ಸಾಮಾಜಿಕ ಕಾರ್ಯಗಳ ಮೂಲಕ ಗಮನ ಸೆಳೆಯುತ್ತಿದೆ. ಶ್ರೀಮಠದ ಲಿಂಗೈಕ್ಯ ಪೂಜ್ಯರ ಸಂಕಲ್ಪಗಳನ್ನು ಪ್ರಸ್ತುತ ಶ್ರೀಗಳು ಈಡೇರಿಸುತ್ತಿದ್ದಾರೆ. ಈ ಮೂಲಕ ಶ್ರೀಮಠದ ಕೀರ್ತಿಯನ್ನು ನಾಡಿನಲ್ಲಿ ಪಸರಿಸುತ್ತಿದ್ದಾರೆ. ಶ್ರೀಮಠದ ಕಲ್ಯಾಣ ಮಂಟಪ ಉದ್ಘಾಟನಾ ಸಮಾರಂಭವನ್ನು ಕೆಲ ತಿಂಗಳ ಹಿಂದೆ ಅದ್ದೂರಿಯಾಗಿ ಮಾಡಿದ್ದನ್ನು ಸ್ಮರಿಸಿಕೊಂಡರು.

ಕಾರ್ಯಕ್ರಮದಲ್ಲಿ ಹೊನ್ನಿಗನೂರಿನ ಪ್ರವಚನಕಾರ ವಿರುಪಾಕ್ಷಿ ಶಾಸ್ತ್ರೀಜಿ, ಈರಪ್ಪ ಹುಣಸಿಕಟ್ಟಿ, ರಾಮು ಬಿರಾದಾರ,ಯಂಕಪ್ಪ ಬನ್ನೂರ, ಗವಾಯಿ ಅಂಬರೀಶ, ತಬಲಾ ವಾದಕ ಮಲ್ಲೇಶಕುಮಾರ ಮದ್ಲಾಪುರ ಇದ್ದರು.

ಮಹಾಂತೇಶ ಮನಗೂಳಿ ಸ್ವಾಗತಿಸಿ, ನಿರೂಪಿಸಿದರು. ಶ್ರವಣ ಕೋಟ್ಯಾಳ ವಂದಿಸಿದರು.

# ಹೆಲ್ಮೆಟ್ ಧರಿಸಿ ವಾಹನ ಚಲಾಯಿಸುವುದರಿಂದ ಜೀವರಕ್ಷಣೆ

**ಉದಯರಶ್ಮಿ ನ್ಯೂಸ್**



ಸಿಂದಗಿ: ಹೆಲ್ಮೆಟ್ ಧರಿಸಿ ವಾಹನ ಚಲಾಯಿಸುವುದರಿಂದ ನಮ್ಮ ಜೀವವನ್ನು ನಾವು ರಕ್ಷಣೆ ಮಾಡಿಕೊಳ್ಳಬಹುದು. ಹೆಲ್ಮೆಟ್ ಕಡ್ಡಾಯವಾಗಿ ಧರಿಸಿ ಸುರಕ್ಷಿತವಾಗಿ ವಾಹನ ಚಲಿಸುವುದು ನಾವೆಲ್ಲರೂ ರೂಢಿ ಮಾಡಿಕೊಳ್ಳಬೇಕು ಎಂದು ಸಿಂದಗಿ ಪೋಲಿಸ ಠಾಣೆಯ ಆರಕ್ಷಕ ಅಧಿಕಾರಿ ಭೀಮಪ್ಪ ರಬಕವಿ ಹೇಳಿದರು.

ಪಟ್ಟಣದ ತಾಲೂಕಾ ಶಿಕ್ಷಣ ಪ್ರಸಾರಕ ಮಂಡಳಿಯ ಸಿ.ಎಂ.ಮನಗೂಳಿ ಪದವಿ ಕಾಲೇಜ, ಜೆ.ಎಚ್.ಪಟೇಲ ಶಿಕ್ಷಣ ಮಹಾವಿದ್ಯಾಲಯದಲ್ಲಿ ಗುರುವಾರ ಸಿಂದಗಿ ಪೋಲಿಸ್ ಠಾಣೆಯ ಸಹಯೋಗದಲ್ಲಿ ಹಮ್ಮಿಕೊಂಡಿರುವ ಹೆಲ್ಮೆಟ್ ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ 2023-24ನೆಯ ಸಾಲಿನಲ್ಲಿ ಹೆಲ್ಮೆಟ್ ಧರಿಸದೆ ವಾಹನ ಚಲಾಯಿಸಿದ ಪರಿಣಾಮ ಸುಮಾರು 418ಕ್ಕೂ ಅಧಿಕ ಜನರು ಸಾವನ್ನಪ್ಪಿದ್ದಾರೆ. ನಾವೆಲ್ಲರೂ ನಮ್ಮ ಕುಟುಂಬವನ್ನು ರಕ್ಷಣೆ ಮಾಡುವಂತವರು. ನಾವು ಜಾಗೃತರಾಗಿ ಕಡ್ಡಾಯವಾಗಿ ಹೆಲ್ಮೆಟ್‌ನ್ನು ಧರಿಸಿ ವಾಹನ ಚಲಾಯಿಸಬೇಕು ಎಂದರು.

ಈ ವೇಳೆ ಎಚ್.ಜಿ.ಪಪೂ ಕಾಲೇಜಿನ ಪ್ರಾಚಾರ್ಯ ಎ.ಆರ್. ಹೆಗ್ಗಣದೊಡ್ಡಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಜೆ.ಎಚ್.ಪಟೇಲ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಬಿ.ಎಂ.ಹುರಕಡ್ಲಿ, ಉಪನ್ಯಾಸಕ ಎಸ್.ಆರ್.ಬಿರಾದಾರ, ಎಸ್.ಎ.ಜಾಗಿರದಾರ ಸೇರಿದಂತೆ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಹಾಗೂ ಪ್ರಶಿಕ್ಷಣಾರ್ಥಿಗಳು ಇದ್ದರು.

# ಸಮಾಜ ಪರಿವರ್ತನೆಗೆ ನಾಟಕಗಳು ಸಹಕಾರಿ :ಕೊಟ್ರಶೆಟ್ಟಿ



**ಉದಯರಶ್ಮಿ ನ್ಯೂಸ್**


ಬಸವನಬಾಗೇವಾಡಿ: ಜಾತ್ರಾಮಹೋತ್ಸವ ಸೇರಿದಂತೆ ವಿವಿಧ ಸಂದರ್ಭಗಳಲ್ಲಿ ಹಮ್ಮಿಕೊಳ್ಳುವ ನಾಟಕ ಪ್ರದರ್ಶನಗಳಿಂದ ಸಮಾಜ ಪರಿವರ್ತನೆಯಾಗಲು ಸಹಕಾರಿಯಾಗುತ್ತದೆ ಎಂದು ಪುರಸಭೆ ಮಾಜಿ ಅಧ್ಯಕ್ಷ, ಜೆಡಿಎಸ್ ತಾಲೂಕಾಧ್ಯಕ್ಷ ಜಗದೀಶ ಕೊಟ್ರಶೆಟ್ಟಿ ಹೇಳಿದರು.

ಪಟ್ಟಣದ ಬಸವನಗರದಲ್ಲಿರುವ ರೇಣುಕಾ ಯಲ್ಲಮ್ಮದೇವಿ ಜಾತ್ರಾಮಹೋತ್ಸವದಂಗವಾಗಿ ಗುರುವಾರ ರಾತ್ರಿ ಹಮ್ಮಿಕೊಂಡಿದ್ದ ರಾಯಭಾಗ ತಾಲೂಕಿನ ಅಲಖನೂರಿನ ಮಲ್ಲಿಕಾರ್ಜುನ ನಾಟ್ಯ ಸಂಘದ ಮಗ ಹೋದರು ಮಾಂಗಲ್ಯ ಬೇಕು ಎಂಬ ನಾಟಕ ಪ್ರದರ್ಶನ ಉದ್ಘಾಟಿಸಿ ಮಾತನಾಡಿದ ಅವರು, ಮೊದಲು ಗ್ರಾಮಾಂತರ ಪ್ರದೇಶಗಳಲ್ಲಿ ನಾಟಕಗಳ ಪ್ರದರ್ಶನ ಹೆಚ್ಚಾಗಿ ನಡೆಯುತ್ತಿದ್ದವು. ಈಚೆಗೆ ಜಾತ್ರಾಮಹೋತ್ಸವದಂತಹ ಕಾರ್ಯಕ್ರಮಗಳಲ್ಲಿ ನಾಟಕ ಪ್ರದರ್ಶನ ಹಮ್ಮಿಕೊಳ್ಳಲಾಗುತ್ತಿದೆ. ನಾಟಕಗಳು ಸಮಾಜದ ಪ್ರತಿಬಿಂಬವಿದ್ದಂತೆ. ಇತ್ತೀಚಿನ ದಿನಗಳಲ್ಲಿ ನಾಟಕ ನೋಡುವ ಹವ್ಯಾಸ ಕಡಿಮೆಯಾಗುತ್ತಿರುವುದು ನಿಜಕ್ಕೂ ಆತಂಕಕಾರಿ ಸಂಗತಿ. ನಾಟಕ ಹೆಚ್ಚೆಚ್ಚು ನೋಡುವುದರ ಮೂಲಕ ನಾಟಕ ಕಲೆ ಉಳಿಸಿ ಬೆಳೆಸಿಕೊಂಡು ಹೋಗಬೇಕಾಗಿದೆ ಎಂದ ಅವರು, ಬಸವನಗರದ ಎಲ್ಲ ಹಿರಿಯರು-ಕಿರಿಯರು ಸೇರಿಕೊಂಡು ರೇಣುಕಾ ಯಲ್ಲಮ್ಮದೇವಿ ಜಾತ್ರಾಮಹೋತ್ಸವದಂಗವಾಗಿ ಪ್ರತಿವರ್ಷ ವಿಶೇಷ ಕಾರ್ಯಕ್ರಮಗಳನ್ನು ಆಯೋಜನೆ ಮಾಡುತ್ತಿರುವುದು ಶ್ಲಾಘನೀಯ. ಬಸವನಗರದ ಎಲ್ಲ ಸಮಾಜ ಬಾಂಧವರು ಕೂಡಿಕೊಂಡು ಉತ್ತಮ ಜಾತ್ರಾಮಹೋತ್ಸವ ಮಾಡುತ್ತಿರುವುದು ಬಸವನಗರದ ಜನರ ಒಗ್ಗಟ್ಟನ್ನು ತೋರಿಸುತ್ತದೆ. ಮುಂದಿನ ದಿನಗಳಲ್ಲಿ ಇದು ಮುಂದುವರಿದು ಹೆಚ್ಚಿನ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವಂತಾಗಲಿ ಎಂದರು.

ಸಾನಿಧ್ಯ ವಹಿಸಿದ್ದ ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ ಮಾತನಾಡಿ, ನಾಟಕಗಳು ಕೇವಲ ಮನರಂಜನೆಯಲ್ಲ. ಅವುಗಳು ಪ್ರಸ್ತುತ ಸಮಾಜದ ಅಭಿವ್ಯಕ್ತಿಯಾಗಿ ಕೆಲಸ ಮಾಡುತ್ತವೆ. ಚಿಂತನಪರ ನಾಟಕಗಳನ್ನು ನೋಡಿದರೆ ಜೀವನದಲ್ಲಿ ಬದಲಾವಣೆ ಹೊಂದಲು ಸಾಧ್ಯ. ರಂಗಭೂಮಿ ಕಲಾವಿದರನ್ನು ಪೋಷಿಸಲು ನಾಟಕ ಪ್ರದರ್ಶನಗಳನ್ನು ಆಯೋಜನೆ ಮಾಡುವುದು ಉತ್ತಮ. ರಂಗಭೂಮಿಯನ್ನು ಇಂದಿನ ಆಧುನಿಕ ಕಾಲದಲ್ಲಿ ಸಂರಕ್ಷಣೆ ಮಾಡುವುದು ತುಂಬಾ ಅಗತ್ಯವಿದೆ ಎಂದ ಅವರು, ಜಾತ್ರಾಮಹೋತ್ಸವದಂಗವಾಗಿ ಇಲ್ಲಿನ ಜನರು ನಾಟಕ ಪ್ರದರ್ಶನ ಹಮ್ಮಿಕೊಂಡಿರುವುದು ಉತ್ತಮ. ಮುಂದಿನ ದಿನಗಳಲ್ಲಿ ಪುರಾಣ-ಪ್ರವಚನ ಕಾರ್ಯಕ್ರಮ ಆಯೋಜನೆ ಮಾಡುವ ಕಡೆಗೆ ಗಮನ ಹರಿಸಬೇಕೆಂದರು.

ಕಾರ್ಯಕ್ರಮದಲ್ಲಿ ಪುರಸಭೆ ಮಾಜಿ ಅಧ್ಯಕ್ಷೆ, ಸದಸ್ಯೆ ಲಕ್ಷ್ಮೀಬಾಯಿ ಶರಣಪ್ಪ ಬೆಲ್ಲದ, ಬಸವರಾಜ ಟಕ್ಕಳಕಿ, ಬಸವರಾಜ ಕಾಮನಕೇರಿ, ಹನುಮಂತ ಹತ್ತಿ, ಭೀಮಶಿ ಮದ್ದರಕ್ಕಿ, ರಮೇಶ ಪವಾರ, ಸಂಗಮೇಶ ದೊಡ್ಡಮನಿ ಇತರರು ಇದ್ದರು. ರಾಜು ಕುಂಬಾರ ಸ್ವಾಗತಿಸಿ, ನಿರೂಪಿಸಿದರು.




**ಉದಯರಶ್ಮಿ ದಿನಪತ್ರಿಕೆ**

ಬರಗಾಲವನ್ನು ಮರೆಸುವಷ್ಟು ಮಳೆಯಾಗುತ್ತಿದೆ. ಮಳೆ ತುಂಬಾ ಕಡಿಮೆ ಎನ್ನಲಾದ ಕೋಲಾರ, ಚಿಕ್ಕಬಳ್ಳಾಪುರ ಮತ್ತು ಕಲ್ಯಾಣ ಕರ್ನಾಟಕದ ಮೂಲೆಮೂಲೆಗಳಲ್ಲಿ ಸಹ ಮಳೆ ಬೀಳುತ್ತಿದೆ..

ಕೃಷಿ ದೃಷ್ಟಿಯಿಂದ ಈ ಮಳೆಯ ಪರಿಣಾಮ ಲಾಭವೋ ನಷ್ಟವೋ ವೈಯಕ್ತಿಕವಾಗಿ ನನಗೆ ಅಷ್ಟೊಂದು ಮಾಹಿತಿ ಇಲ್ಲ. ಆದರೆ ಅಂತರ್ಜಲದ ಮಟ್ಟ ಮಾತ್ರ ಉತ್ತಮವಾಗಬಹುದು ಎಂದು ಹೇಳಲಾಗುತ್ತದೆ..

ಏನೇ ಇರಲಿ, ಪ್ರಕೃತಿಯ ಎಲ್ಲಾ ವೈಪರೀತ್ಯಗಳನ್ನು ನಾವು ಸಹಿಸಲೇಬೇಕು. ಅದು ಅನಿವಾರ್ಯ. ಆದರೆ ಆಡಳಿತ ವ್ಯವಸ್ಥೆ, ಪರಿಸರ, ಕೃಷಿ ಮತ್ತು ನೀರಾವರಿ ತಜ್ಞರು ಈ ಅಧಿಕ ಮಳೆಯ ಗರಿಷ್ಠ ಉಪಯೋಗ ಪಡೆಯಲು ಮತ್ತು ಕೆಲವು ಶಾಶ್ವತ



ಭವಿಷ್ಯದ ಯೋಜನೆಗಳನ್ನು ರೂಪಿಸಲು ಪ್ರಯತ್ನಿಸಬೇಕು..

ವಾತಾವರಣ ಹೀಗೇ ಇರುತ್ತದೆ ಎಂದು ಹೇಳಲಾಗುವುದಿಲ್ಲ. ಕೆಲವು ವರ್ಷಗಳ ನಂತರ ಬರಗಾಲ ಬರಬಹುದು. ಅದರ ಪರಿಣಾಮ ಕಡಿಮೆ ಮಾಡಲು ನೀರಿನ ಸಂಗ್ರಹ ಮತ್ತು ಹಂಚಿಕೆಯ ಬಗ್ಗೆ ಏನಾದರೂ ಕಾರ್ಯ ಯೋಜನೆಯನ್ನು ಜಾರಿಗೊಳಿಸಬೇಕು..

ಅತಿವೃಷ್ಟಿ ಮತ್ತು ಅನಾವೃಷ್ಟಿಯ ಅನುಭವದ ಆಧಾರದ ಮೇಲೆ ಇದನ್ನು ಪ್ರಾಯೋಗಿಕವಾಗಿ ಪ್ರಯತ್ನಿಸಿದರೆ ಸಾಧ್ಯವಾಗಬಹುದು. ಮುಖ್ಯವಾಗಿ ಶಾಶ್ವತ ಬರಗಾಲ ಪೀಡಿತ ಪ್ರದೇಶಗಳು ಎಂದು ಕರೆಯಲಾಗುತ್ತಿದ್ದ ಜಿಲ್ಲೆ, ತಾಲ್ಲೂಕುಗಳಲ್ಲಿ ಮುಂದೆ ಮಳೆ ಕಡಿಮೆಯಾದಾಗ ಈಗಿನ ಅಧಿಕ ನೀರು ಅಥವಾ ಅಂತರ್ಜಲ ಮಟ್ಟವನ್ನು ಹೇಗೆ ಒಂದಷ್ಟು ಕಾಲ ಉಪಯೋಗಿಸಿ ಕೊಳ್ಳಬಹುದು ಎಂಬುದರ ಅಂದಾಜು ಭೂಗರ್ಭ ಶಾಸ್ತ್ರಜ್ಞರು ಮಾಡಬಹುದು. ಅದೇರೀತಿ ಈ ಮಳೆಯ ಕಾರಣದಿಂದ ಸೃಷ್ಟಿಯಾದ ಗಿಡಮರಗಳನ್ನು ಒಂದು ದಟ್ಟ ಅರಣ್ಯ ಪ್ರದೇಶವಾಗಿ ಬೆಳೆಸುವ ಸಾಧ್ಯತೆಗಳನ್ನು ಪರಿಶೀಲಿಸಬಹುದು..

ಸಾಮಾನ್ಯ ಜನರಾದ ನಮಗೆ ಈ ಬಗ್ಗೆ ಹೆಚ್ಚಿನ ಮಾಹಿತಿ ಅಥವಾ ತಿಳಿವಳಿಕೆ ಇರುವುದಿಲ್ಲ. ಆದರೆ ಈ ಕ್ಷೇತ್ರಗಳ ತಜ್ಞರು ಈ ಬಗ್ಗೆ ಜಾಗೃತರಾಗಿ ಸರ್ಕಾರದ ಗಮನಸೆಳೆದು ನಿರಂತರ ಕೆಲಸ ಮಾಡಬೇಕು. ಸಾಮಾನ್ಯ ಜನ ಅವರ ಮೇಲೆಯೇ ಭರವಸೆ ಇಟ್ಟಿರುತ್ತಾರೆ ಮತ್ತು ಅವಲಂಬಿಸಿರುತ್ತಾರೆ. ಇದು ಸರ್ಕಾರ ಮತ್ತು ತಜ್ಞರ ಕರ್ತವ್ಯ ಮತ್ತು ಜವಾಬ್ದಾರಿ..

ಆದರೆ ದುರಾದೃಷ್ಟವಶಾತ್ ರಾಜಕೀಯ ಪಕ್ಷಗಳಿಗೆ, ಮಾಧ್ಯಮದವರಿಗೆ ಈ ರೀತಿಯ ಶಾಶ್ವತ ಅಭಿವೃದ್ಧಿಗಿಂತ ಚುನಾವಣೆಯೇ ಬಹುದೊಡ್ಡ ಸುದ್ದಿ ಎಂಬಂತೆ ಪ್ರಚಾರ ಮಾಡುತ್ತಾರೆ. ತಮ್ಮ ಎಲ್ಲಾ ಸಮಯ ತಂತ್ರಗಾರಿಕೆ ಹಣ ಎಲ್ಲವೂ ಅದರಲ್ಲಿಯೇ ಕಳೆಯುತ್ತಾರೆ..

ಅತಿವೃಷ್ಟಿ ಮತ್ತು ಅನಾವೃಷ್ಟಿ ಸಮಯದಲ್ಲಿ ಸರ್ಕಾರದ ಬೊಕ್ಕಸಕ್ಕೆ ಸಾಕಷ್ಟು ಒತ್ತಡ ಬೀಳುತ್ತದೆ. ಕೆಲವೊಮ್ಮೆ ಸಾಲ ಮಾಡಿ ಹಣ ನೀಡಬೇಕಾಗುತ್ತದೆ. ಆದ್ದರಿಂದ ಇಂತಹ ಸಮೃದ್ಧ ನೀರಿನ ಸಂಪನ್ಮೂಲಗಳು ಪ್ರಾಕೃತಿಕವಾಗಿ ಸಿಗುತ್ತಿರುವಾಗ ಇದರ ಪರಿಣಾಮಕಾರಿ ಉಪಯೋಗ ಪಡೆಯುವುದು ಆಡಳಿತದ ಜವಾಬ್ದಾರಿ..

ಆದರೆ ಏನು ಮಾಡುವುದು ಸರ್ಕಾರ ಎಂಬುದು ರಾಜಕೀಯ ಪಕ್ಷಗಳಿಗೆ ಬಾಡಿಗೆ ಮನೆ ಇದ್ದಂತೆ.



ಇರುವಷ್ಟು ದಿನ ಮಾತ್ರ ತಮಗೆ ಎಷ್ಟು ಅನುಕೂಲವೋ ಅಷ್ಟು ಮಾಡಿಕೊಂಡು ಹೋಗುವಾಗ ಮನೆಯನ್ನು ಕೆಡಿಸಿಯೇ ಹೋಗುತ್ತಾರೆ. ಮುಂದೆ ಮತ್ತೊಬ್ಬರು..

ರಾಜ್ಯ ನಮ್ಮ ಸ್ವಂತ ಆಸ್ತಿ. ಅದನ್ನು ಮುಂದಿನ ತಲೆಮಾರಿಗೂ ಕೂಡ ಇನ್ನೂ ಉತ್ತಮವಾಗಿ ಬಿಟ್ಟು ಹೋಗಬೇಕು ಎಂಬ ಕಾಳಜಿ ಕಾಣುತ್ತಿಲ್ಲ. ಪ್ರತಿ ಮಳೆಗಾಲ ಅಥವಾ ಬರಗಾಲ ಇವರಿಗೆ ಹಣ ಮಾಡುವ ದಂಧೆಯಾಗಿದೆ..

ಪ್ರಾಕೃತಿಕ ಸಂಪನ್ಮೂಲಗಳನ್ನು ಸರಿಯಾಗಿ ಉಪಯೋಗಿಸಿಕೊಂಡರೆ ಪ್ರಕೃತಿಯ ವಿಕೋಪಗಳ ದುಷ್ಪರಿಣಾಮಗಳನ್ನು ಖಂಡಿತ ಕಡಿಮೆ ಮಾಡಿಕೊಳ್ಳಬಹುದು. ಇಲ್ಲದಿದ್ದರೆ ಪ್ರಕೃತಿಯ ಸಹಜ ವೈಪರೀತ್ಯಗಳನ್ನೇ ಸಹಿಸಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣ ಆಗುವುದು ಖಚಿತ..

ಆದ್ದರಿಂದ ದಯವಿಟ್ಟು ಸರ್ಕಾರ ಯಾರದೇ ಇರಲಿ, ದೀರ್ಘಕಾಲದ ಶಾಶ್ವತ ಯೋಜನೆಗಳಿಗೆ ಪ್ರಾಮುಖ್ಯತೆ ನೀಡಿ ಮುಂದೆ ಹಣ ಸಮಯ ಉಳಿತಾಯ ಮಾಡಲು ಪ್ರಯತ್ನಿಸಿ. ಅಧಿಕಾರ ಎಂಬುದು ನಿಮ್ಮ ಸ್ವಂತ ಆಸ್ತಿಯಲ್ಲ. ಅದು ಒಂದು ಸಾರ್ವಜನಿಕ ಸೇವಾ ವೇದಿಕೆ.

ಅದೇ ಮಾನವೀಯ ಧರ್ಮ..



# ಕೂಡಲಸಂಗಮ ಅಭಿವೃದ್ಧಿ ಮಂಡಳಿಯಿಂದ ಬಸ್ ಸೌಲಭ್ಯ

**ಉದಯರಶ್ಮಿ ನ್ಯೂಸ್**




ಬಸವನಬಾಗೇವಾಡಿ: ಪಟ್ಟಣದಲ್ಲಿ ಕೂಡಲಸಂಗಮ ಅಭಿವೃದ್ಧಿ ಮಂಡಳಿಯ ಅಡಿಯಲ್ಲಿ ನಡೆಯುತ್ತಿರುವ ಬಸವೇಶ್ವರ ದೇವಾಲಯ ಆಂಗ್ಲ ಮಾಧ್ಯಮ ಶಾಲೆಗೆ ಅಗತ್ಯವಿರುವ ಎರಡು ಬಸ್ಸಗಳನ್ನು ಕೂಡಲಸಂಗಮ ಅಭಿವೃದ್ಧಿ ಮಂಡಳಿ ನೀಡಿದೆ. ಈ ಶಾಲೆಗೆ ಸುತ್ತಮುತ್ತಲಿಂದ ಬರುವ ವಿದ್ಯಾರ್ಥಿಗಳಿಗೆ ಈ ಬಸ್ಸಗಳು ನೆರವಾಗುತ್ತವೆ ಎಂದು ಕೂಡಲಸಂಗಮ ಅಭಿವೃದ್ಧಿ ಮಂಡಳಿ ಆಯುಕ್ತ, ಹುನಗುಂದ ತಹಸೀಲ್ದಾರ ನಿಂಗಪ್ಪ ಬಿರಾದಾರ ಹೇಳಿದರು.

ಪಟ್ಟಣದ ಕೂಡಲಸಂಗಮ ಅಭಿವೃದ್ಧಿ ಮಂಡಳಿಯು ಅಡಿಯಲ್ಲಿರುವ ಬಸವೇಶ್ವರ ದೇವಾಲಯ ಅಂತರಾಷ್ಟ್ರೀಯ ಶಾಲೆಗೆ ನೂತನವಾಗಿ ಬಂದಿರುವ ಎರಡು ಬಸ್ಸಗಳ ಪೂಜೆ ನೆರವೇರಿದ ನಂತರ ಚಾಲನೆ ನೀಡಿ ಮಾತನಾಡಿದ ಅವರು, ಈ ಭಾಗದ ಮಕ್ಕಳಿಗೆ ಉತ್ತಮ ಆಂಗ್ಲ ಮಾಧ್ಯಮ ಶಾಲೆ ಇರದೇ ಇರುವದನ್ನು ಗಮನಿಸಿದ ಆಗಿನ ಮಂಡಳಿ ವಿಶೇಷಾ[illegible]ಕಾರಿ, ನಿವೃತ್ತ ಐಎಎಸ್ ಅಧಿಕಾರಿ ಡಾ. ಎಸ್.ಎಂ.ಜಾಮದಾರ ಅವರು ಈ ಶಾಲೆಯನ್ನು ಆರಂಭಿಸುವ ಮೂಲಕ ಈ ಭಾಗದ ಮಕ್ಕಳಿಗೆ ಉತ್ತಮ ಆಂಗ್ಲ ಮಾಧ್ಯಮ ಶಾಲೆ ನೀಡಿದ್ದಾರೆ. ಈ ಶಾಲೆಯು ಪ್ರಗತಿಯತ್ತ ನಡೆಯುತ್ತಿದೆ. ಇದೀಗ ಮಂಡಳಿಯು ಈ ಶಾಲೆಗೆ ಬರುವ ಸುತ್ತಮುತ್ತಲಿನ ಮಕ್ಕಳಿಗೆ ನೆರವಾಗುವ ಉದ್ದೇಶದಿಂದ ಎರಡು ಬಸ್ಸಗಳನ್ನು ನೀಡಿದೆ.ಎಲ್.ಕೆ.ಜಿ., ಯು.ಕೆ.ಜಿ. ಮಕ್ಕಳಿಗೆ ಉಚಿತವಾಗಿ ಬಸ್ ಸೌಲಭ್ಯ ನೀಡಲಾಗುತ್ತದೆ. ಮುಂದಿನ ದಿನಗಳಲ್ಲಿ ಹೆಚ್ಚಿನ ಬಸ್ ಸೌಲಭ್ಯ ಒದಗಿಸಲಾಗುವುದು. ಶಾಲೆಗೆ ಬೇಕಾಗುವ ಅಗತ್ಯ ಸೌಲಭ್ಯಗಳನ್ನು ಮಂಡಳಿಯಿಂದ ನೀಡಲಾಗುವದು. ಮುಂದಿನ ದಿನಗಳಲ್ಲಿ ಶಿಕ್ಷಕ ಬಾಂಧವರು ಉತ್ತಮ ಗುಣಮಟ್ಟ ಶಿಕ್ಷಣ ನೀಡುವ ಮೂಲಕ ಮಕ್ಕಳನ್ನು ಉತ್ತಮ ಪ್ರಜೆಗಳನ್ನಾಗಿ ತಯಾರು ಮಾಡಬೇಕೆಂದರು.

ಗೌರಿಶಂಕರ ಚರಂತಿಮಠ ಬಸ್ ಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಮಂಡಳಿಯ ತಹಸೀಲ್ದಾರ ಜೆ.ಎಸ್.ಚಿನಿವಾಲರ, ಲೆಕ್ಕ ಅಧಿಕ್ಷಕ ಬಸವರಾಜ ಕಳ್ಳಿ, ಶಾಲೆಯ ಪ್ರಾಚಾರ್ಯೆ ಆರ್.ಎಂ.ರೋಣದ, ಎಸ್.ಎಂ.ಬಿಸ್ಟಗೊಂಡ, ಎಸ್.ಎ.ತಾಂಬೆ, ಎ.ಕೆ.ಕುಲಕರ್ಣಿ, ಜೆ.ಬಿ. ಕರಭಂಟನಾಳ, ವೈ.ಡಿ.ದೊಡ್ಡಮನಿ, ಎಸ್.ಪಿ.ಸಾಳುಂಕೆ,ಮಹೇಶ ಹುಮನಾಬಾದ, ಬಿ.ಎನ್.ಹಂಚಲಿ, ಅಮಿತ ಕಮ್ಮಾರ, ಮಹೇಶ ಪತ್ತಾರ, ಎಂ.ಟಿ.ಸಂಗಮ ಇತರರು ಇದ್ದರು. ಈ ಸಂದರ್ಭದಲ್ಲಿ ಹಾಜ-ರಿದ್ದ ವಿದ್ಯಾರ್ಥಿಗಳು ಶಾಲೆಗೆ ಬಸ್ ಬಂದಿರುವದನ್ನು ಕಂಡು ಸಂಭ್ರಮಿಸಿದರು.

ನಂತರ ಕೂಡಲಸಂಗಮ ಅಭಿವೃದ್ಧಿ ಮಂಡಳಿ ಆಯುಕ್ತ ನಿಂಗಪ್ಪ ಬಿರಾದಾರ ಅವರು ವಿದ್ಯಾರ್ಥಿಗಳೊಂದಿಗೆ ಬಸ್ನಲ್ಲಿ ಒಂದು ಸುತ್ತು ಹೋಗಿ ಬಂದರು.

# ಚರಂಡಿಯ ನಾಲೆಯಲ್ಲಿ ಬಿದ್ದು ಪ್ರಾಣಾಪಾಯದಿಂದ ಪಾರಾದ 6 ವರ್ಷದ ಬಾಲಕ!

# ಇಂಡಿಯಲ್ಲಿ ಮೃತ್ಯುಕೂಪವಾಗಿರುವ ಚರಂಡಿಯ ನಾಲೆಗಳು!

**ಉದಯರಶ್ಮಿ ನ್ಯೂಸ್**

ಇಂಡಿ: ಚರಂಡಿ ನಾಲೆಯಲ್ಲಿ 6 ವರ್ಷದ ಮಗು ಆಯತಪ್ಪಿ ಬಿದ್ದು ಪ್ರಾಣಾಪಾಯದಿಂದ ಪಾರಾದ



ಘಟನೆ ಪಟ್ಟಣದಲ್ಲಿ ಗುರುವಾರ ನಡೆದಿದೆ.

ಪಟ್ಟಣದ 16 ಮತ್ತು 17 ನೇ ನಂಬರ ವಾರ್ಡಲ್ಲಿ ಚರಂಡಿಂ-ಯ ನಾಲೆಗಳು ಮೃತ್ಯುಕೂಪವಾಗಿ ನಿಂತಿವೆ. ವಾರ್ಡಿನ ಪ್ರಮುಖ ರಸ್ತೆಯ ಭಾಗವಾನ ಗಲ್ಲಿಯಲ್ಲಿರುವ ರಸ್ತೆಯ ಮಧ್ಯದಲ್ಲಿ ಮೃತ್ಯುಕೂಪವಾಗಿವೆ. ಗುರುವಾರ ಸಾಯಂಕಾಲ ಸುಮಾರು 6 ವರ್ಷದ ಬಾಲಕ ಬಿಲಾಲ ಡಾಂಗೆ ಎಂಬ ಮುಗ್ಧ ಮಗು ಆಳವಾದ ತೆರೆದ ಚರಂಡಿಯಲ್ಲಿ ಬಿದ್ದು ಮಗು ಜೀವನ್ಮರಣದ ಸ್ಥಿತಿಯಲ್ಲಿದ್ದಾಗ ದಾರಿ ಹೋಗುವ ವ್ಯಕ್ತಿ ಮಗುವನ್ನು ರಕ್ಷಣೆ ಮಾಡುವ ಕಾರ್ಯ ಮಾಡಿದ್ದು, ಆ ಮಗು ಈಗ ಸದ್ಯ ಸುರಕ್ಷಿತವಾಗಿದೆ.

"ವಾರ್ಡ 16 ಮತ್ತು 17 ರಲ್ಲಿ ಮುಖ್ಯ ರಸ್ತೆ ಹಾಗೂ ಪಕ್ಕದಲ್ಲಿ ಚರಂಡಿ ನಾಲೆಗಳು ನಿರ್ಮಾಣ ಮಾಡಿದ್ದು, ಅವು ಅವೈಜ್ಞಾನಿಕ ರೂಪದಲ್ಲಿದ್ದು , ಪ್ರಾಣ ಹಾನಿ ಅನುಭವಿಸುವ ದೊಡ್ಡ ಗುಂಡಿಗಳಾಗಿವೆ. ಇಂಡಿ ಪಟ್ಟಣದ ಹಲವು ಭಾಗದಿಂದ ಚರಂಡಿ ಮತ್ತು ಮಳೆಯ ನೀರು ಹರಿದು ಬರುತ್ತಿದೆ. ಆದ ರೆ ಚರಂಡಿಯಲ್ಲಿ ಸರಳವಾಗಿ ನೀರು ಹರಿಯುವಂತೆ ಮಾಡಿಲ್ಲ. ಕೂಡಲೇ ಪಟ್ಟಣದಲ್ಲಿರುವ ಚರಂಡಿ ಗುಂಡಿಗಳನ್ನು ಸರಿಪಡಿಸಿ ಜೀವ ಹಾನಿಯಾಗದಂತೆ ನೋಡಿಕೊಳ್ಳಬೇಕಾಗಿದೆ."

– ಖಾದೀರ್ ಡಾಂಗೆ, ಪಟ್ಟಣದ ನಿವಾಸಿ



"ಚರಂಡಿಯ ನಾಲೆಯಲ್ಲಿ ಮಗು ಬಿದ್ದ ಘಟನೆ ನಡೆದಿದೆ. ಅದಕ್ಕಾಗಿ ಸ್ಥಳಕ್ಕೆ ಬೇಟಿ ನೀಡಿ ಅಲ್ಲಿರುವ ಸಮಸ್ಯೆ ಗಮನಿಸಿ, ಸ್ಥಳದಲ್ಲಿಯೇ ನಿಂತುಕೊಂಡು 3 ಜೆಸಿಬಿ ಮೂಲಕ ಚರಂಡಿ ಸ್ವಚ್ಚಗೊಳಿಸಿ ನೀರು ಸರಳವಾಗಿ ಹೋಗುವಂತೆ ಕಾರ್ಯಾ ಮಾಡಲಾಗಿದೆ. ಅದಲ್ಲದೇ ಪಟ್ಟಣದಲ್ಲಿ ಇಂತಹ ಗುಂಡಿಗಳು ಬಗ್ಗೆ ಕೂಡಲೇ ಪರಿಶೀಲನೆ ನಡೆಸಿ, ಅವುಗಳನ್ನು ಸರಿಪಡಿಸಲು ಪುರಸಭೆಗೆ ಸೂಚಿಸಲಾಗಿದೆ."

– ಅಬೀದ್ ಗದ್ಯಾಳ, ಪುರಸಭೆ ಆಡಳಿತ ಅಧಿಕಾರಿ ಹಾಗೂ ಕಂದಾಯ ಉಪವಿಭಾಗ ಅಧಿಕಾರಿ

ಈ ಸಂದರ್ಭದಲ್ಲಿ ಆ ಮಗುವಿನ ತಂದೆ ಇಸ್ಮಾಯಿಲ್ ಡಾಂಗೆ ಮಾತನಾಡಿದ್ದು, "ಸುಮಾರು ದಿನಗಳ ಹಿಂದೆ ಕಾಮಗಾರಿ ಮಾಡಿದ್ದು, ಅದು ವೈಜ್ಞಾನಿಕ ರೂಪದಲ್ಲಿ ನಡೆದಿಲ್ಲ. ಅದರಲ್ಲಿ ಚರಂಡಿಯ ನಾಲೆಗಳು ಸುಮಾರು 6 ರಿಂದ 8 ಅಡಿ ಆಳವಿದ್ದು ಅವುಗಳ ಬಗ್ಗೆ ಪರ್ಯಾಯ ಮಾರ್ಗ ಕಂಡುಕೊಳ್ಳುವಲ್ಲಿ ಪುರಸಭೆ ನಿರ್ಲಕ್ಷ್ಯ ವಹಿಸಿದೆ. ಆದ್ದರಿಂದ ಚಿಕ್ಕ ಮಕ್ಕಳು , ವಯೋ ವೃದ್ಧರು, ಅಸ್ಪತ್ರೆಗೆ ತೆರಳುವ ರೋಗಿಗಳು ಹಾಗೂ ಬೈಕ್ ಸವಾರರು ತುಂಬಾ ಕಷ್ಟ ಅನುಭವಿಸುತ್ತಿದ್ದಾರೆ. ಈ ಕೂಡಲೇ ತಾಲ್ಲೂಕು ಆಡಳಿತ ಅದರ ಬಗ್ಗೆ ಜವಾಬ್ದಾರಿ ವಹಿಸಬೇಕು. ಅತ್ಯಂತ ಶಿಸ್ತು ಬದ್ಧ ಕೆಲಸ ಮಾಡಿ ಜೀವಗಳ ಪ್ರಾಣ ಹಾನಿಯಾಗದಂತೆ ನೋಡಿಕೊಳ್ಳಬೇಕು" ಎಂದು ಆಗ್ರಹಿಸಿದರು.

ಇನ್ನು ನಗರದಲ್ಲಿ ಬೇರೆ ಬೇರೆ ಕಡೆಯೂ ಈ ರೀತಿಯ ಚರಂಡಿಯ ನಾಲೆಯ ಗುಂಡಿಗಳಿದ್ದು ಕೂಡಲೇ ಸರಿಪಡಿಸಬೇಕೆಂಬುದು 'ಉದಯರಶ್ಮಿ' ಪತ್ರಿಕೆಯ ಆಶಯವಾಗಿದೆ.

# ರೇವತಗಾಂವದಲ್ಲಿ ಕುಂಭ-ಕಳಶಗಳೊಂದಿಗೆ ಕಾಶಿ ಜಗದ್ಗುರುಗಳ ಸಾರೋಟ ಉತ್ಸವ

# ಅಧ್ಯಾತ್ಮಿಕ ಸ್ಪರ್ಶದಿಂದ ಬದುಕಿಗೆ ನಿರಂತರ ಪ್ರಸನ್ನತೆ :ಕಾಶಿ ಜಗದ್ಗುರು

**ಉದಯರಶ್ಮಿ ನ್ಯೂಸ್**



ಚಡಚಣ: ಮಾನಸಿಕ ನೆಮ್ಮದಿಯನ್ನು ನೀಡುವುದಕ್ಕಾಗಿಯೇ ಜಗತ್ತಿನಲ್ಲಿ ಧರ್ಮಗಳ ಆವಿಷ್ಕಾರವಾಗಿದೆ. ಆದ-ರೆ ಧರ್ಮದ ಹೆಸರಿನಿಂದಲೇ ಜನಮನದ ಶಾಂತಿಯನ್ನು ಕದಡುವ ವ್ಯರ್ಥ ಪ್ರಯತ್ನಕ್ಕೆ ಯಾರೂ ಮುಂದಾಗಬಾರದು. ನೈತಿಕ ನೆಲೆ, ಸಾಂಸ್ಕೃತಿಕ ಭಾವನೆ, ಸಾಹಿತ್ಯಿಕ ಚಿಂತನೆ ಹಾಗೂ ಅಧ್ಯಾತ್ಮಿಕ ಸ್ಪರ್ಶದಿಂದ ಬದುಕಿಗೆ ನಿರಂತರ ಪ್ರಸನ್ನತೆ ಪ್ರಾಪ್ತವಾಗುತ್ತದೆ ಎಂದು ಕಾಶಿ ಜಗದ್ಗುರು ಡಾ.ಮಲ್ಲಿಕಾರ್ಜುನ ವಿಶ್ವರಾಧ್ಯ ಶಿವಾಚಾರ್ಯ ಭಗವತ್ಪಾದಕರು ಹೇಳಿದರು.

ರೇವತಗಾಂವ ಗ್ರಾಮದ ಶ್ರೀ ರೇವಣಸಿದ್ದೇಶ್ವರ ಮಹಾದ್ವಾರದ ಕಳಸಾರೋಹಣ ಕಾರ್ಯಕ್ರಮವನ್ನು ನೆರವೇರಿಸಿ ಮಾತನಾಡಿದ ಅವರು. ಭಕ್ತಿ, ಭಾವದಿಂದ ಜಂಗಮರನ್ನು ಆರಾಧಿಸುವ ಮೂಲಕ ದೇವರ ಸ್ವರೂಪವನ್ನು ಕಾಣಬಹುದಾಗಿದೆ. ಪರಸ್ಪರ ವಿಶ್ವಾಸ ಇಲ್ಲದೆ ಮನುಷ್ಯ ಬದುಕು ಸಾಗಿಸಲು ಸಾಧ್ಯವಿಲ್ಲ. ಭೌತಿಕ ಬದುಕು ಸುಗಮವಾಗಿ ಸಾಗಲು ಮನುಷ್ಯ ಪರಸ್ಪರ ವಿಶ್ವಾಸ ಹೊಂದಬೇಕು. ಯಾವ ವ್ಯಕ್ತಿ ಸಮಾಜದ ಹಿತವನ್ನು ಬಯಸುತ್ತಾನೋ, ಅಂತಹ ವ್ಯಕ್ತಿ ಬದುಕು ಎಂದಿಗೂ ಸ್ಮರಣೀಯವಾಗಿರುತ್ತದೆ ಎಂದು ಹೇಳಿದರು.

ಕೃಷಿಕರಿಗೆ ಕಿವಿಮಾತು: ರೈತನು ದೇಶದ ಬೆನ್ನೆಲುಬು. ರಾಸಾಯನಿಕ ಗೊಬ್ಬರ ಬಳಸಿ ಬೇಸಾಯ ಮಾಡುವಂತಹ ಪದ್ಧತಿಯನ್ನು ರೈತರು ತೋರೆಯಬೇಕು. ಬದಲಿಗೆ ಇಳುವರಿ ಹೆಚ್ಚಿಸುವ ಹಾಗೂ ಭೂಮಿ ಫಲವತ್ತತೆ ಕಾಯ್ದುಕೊಳ್ಳುವಂಥ ಸಾವಯವ ಕೃಷಿಗೆ ಮುಂದಾಗಬೇಕು.

ರಸಗೊಬ್ಬರವನ್ನು ಅತಿಯಾದ ಪ್ರಮಾಣದಲ್ಲಿ ಬಳಸುತ್ತಿರುವುದರಿಂದ ಕೃಷಿ ಭೂಮಿ ದಿನೇ ದಿನೇ ಫಲವತ್ತತೆ ಕಳೆದುಕೊಳ್ಳುತ್ತಿದೆ. ಅಲ್ಲದೇ, ಮಾನವನ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತಿದೆ. ರಾಸಾಯನಿಕ ಗೊಬ್ಬರ ಬಳಕೆಯಿಂದ ಆಹಾರ ಇಂದು ವಿಷವಾಗುತ್ತಿದೆ. ಇಂಥ ಆಹಾರ ಸೇವಿಸಿದರೆ ಮನುಷ್ಯನ ಜೀವನ ಕ್ರಮವೇ ಬದಲಾಗುತ್ತದೆ. ಆರೋಗ್ಯದಲ್ಲಿ ವ್ಯತ್ಯಯ ಉಂಟಾಗಿ ಕಾಯಿಲೆಗಳಿಗೆ ತುತ್ತಾಗಬೇಕಾಗುತ್ತದೆ. ದೇಶದಲ್ಲಿ ಕೃಷಿಕರು ಇಲ್ಲದಿದ್ದರೇ ದೇಶವೇ ಉಪವಾಸದಿಂದ ಮಲಗಬೇಕಾಗುತ್ತದೆ ಎಂದು ಕಾಶಿ ಜಗದ್ಗುರುಗಳಾದ ಡಾ. ಮಲ್ಲಿಕಾರ್ಜುನ ವಿಶ್ವರಾಧ್ಯ ಶಿವಾಚಾರ್ಯರು ರೈತರಿಗೆ ಕಿವಿ ಮಾತು ಹೇಳಿದರು.

ಧರ್ಮಸಭೆಯ ಅಧ್ಯಕ್ಷತೆ ವಹಿಸಿದ್ದ ಶಾಸಕರಾದ ವಿಠ್ಠಲ ಕಟಕದೊಂಡ ಮಾತನಾಡುತ್ತ, ಗ್ರಾಮೀಣ ಪ್ರದೇಶಗಳ ಸರ್ವಾಂಗೀಣ ಅಭಿವೃದ್ಧಿಗೆ ಬದ್ಧ. ಇದಕ್ಕೆ ಪೂರಕವಾದ ರೂಪ-ರೇಷೆಗಳನ್ನು ಸಿದ್ಧಗೊಳಿಸಿ ಹಲವಾರು ಅಭಿವೃದ್ಧಿ ಕೆಲಸಗಳನ್ನು ಜಾರಿಗೊಳಿಸಲಾಗಿದ್ದು. ಇಂಥಹ ವಿವಿಧ ಜನಪರ ಯೋಜನೆಗಳ ಮೂಲಕ ಅಭಿವೃದ್ಧಿ ಸಾಧ್ಯ. ಮತಕ್ಷೇತ್ರದ ಪ್ರತಿಯೊಂದು ಗ್ರಾಮೀಣ ಪ್ರದೇಶಗಳಿಗೆ ಸಕಲ ನಾಗರಿಕ ಸೌಕರ್ಯ ಕಲ್ಪಿಸುವ ಮೂಲಕ ರಾಜ್ಯದಲ್ಲಿಯೇ ನನ್ನ ಕ್ಷೇತ್ರ ಮಾದರಿ ಗ್ರಾಮಗಳಾಗಿ ಕಂಗೊಳಿಸುವಂತೆ ಮಾಡುವ ಸಂಕಲ್ಪ ಹೊಂದಿದ್ದೇನೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಸಿಗೆ ನೀರು ಹಾಕುವ ಮೂಲಕ ಧರ್ಮಸಭೆ ಉದ್ಘಾಟಿಸಿದ ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ ಮಾತನಾಡುತ್ತ, ನನಗೆ ಯಾವ ಪದವಿ, ಪುನಸ್ಕಾರಗಳು ಬೇಕಾಗಿಲ್ಲ. ಭಾರತವು ಬಲಿಷ್ಠ ಭಾರತವಾಗಬೇಕು. ಬಲಿಷ್ಠವಾಗಬೇಕಾದರೆ ಯುವಕರು ಶಕ್ತಿವಂತರಾಗಬೇಕು. ಇಂದಿನ ಯುವಕರು ಹೆಚ್ಚಾಗಿ ದುಶ್ಚಟಗಳಿಗೆ ಬಲಿಯಾಗಿ ಶಕ್ತಿ ಹೀನರಾಗಿದ್ದಾರೆ. ಯುವಕರು ವ್ಯಸಮುಕ್ತರಾದಾಗ ಬಲಿಷ್ಠ ಭಾರತ, ಬಲಿಷ್ಠ ಸಮಾಜ ನಿರ್ಮಾಣವಾಗಲು ಸಾಧ್ಯ ಎಂದು ಹೇಳಿದರು.



ಗುರುವಾರದಂದು ಮಹಾದ್ವಾರದ ಕಳಸಾರೋಹಣ ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಂಡಿದ್ದ ಕಾಶಿ ಜಗದ್ಗುರುಗಳಾದ ಡಾ. ಮಲ್ಲಿಕಾರ್ಜುನ ವಿಶ್ವರಾಧ್ಯ ಶಿವಾಚಾರ್ಯ ಭಗವತ್ಪಾದಕರು ಸಾರೋಟ ಮಹೋತ್ಸವವು ಸುಮಂಗಲೆಯರಿಂದ ಕುಂಭ-ಕಳಸ, ಆರತಿಗಳೊಂದಿಗೆ, ವಿವಿಧ ವಾದ್ಯ ಮೇಳದವರೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಶ್ರೀ ರೇವಣಸಿದ್ದೇಶ್ವರ ದೇವಾಸ್ಥಾನ ತಲುಪಿತು.

ನಂತರ ಜಗದ್ಗುರುಗಳಿಂದ ಮಹಾದ್ವಾರದ ಕಳಸಾರೋಹಣ ಕಾರ್ಯಕ್ರಮವು ನಡೆಯಿತು. ನಂತರ ಧರ್ಮಸಭೆ ಜರುಗಿತು.

ಈ ಧರ್ಮಸಭೆಯ ನೇತೃತ್ವ ಹಾವಿನಾಳ-ಹತ್ತಳ್ಳಿಯ ಮಹಾಸ್ವಾಮಿಗಳಾದ ಗುರುಪಾದೇಶ್ವರ ಶಿವಾಚಾರ್ಯರು, ಆಲಮೇಲದ ಚಂದ್ರಶೇಖರ ಶಿವಾಚಾರ್ಯರು, ತಡವಲಗಾದ ಅಬಿನವ ರಾಜೋಟೇಶ್ವರ ಶಿವಾಚಾರ್ಯರು, ಜೈನಾಪುರದ ರೇಣುಕಾ ಶಿವಾಚಾರ್ಯರು, ಕಾರ್ಯಕ್ರಮದ ಜ್ಯೋತಿ ಬೆಳಗಿಸಿದವರು ಭೈರವನಾಥ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಮಹಾದೇವಸಾಹುಕಾರ ಭೈರಗೊಂಡ, ಮುಖ್ಯ ಅತಿಥಿಗಳಾಗಿ ಉದಯ ಕಾರಜೋಳ, ಕಾಶುಗೌಡ ಬಿರಾದಾರ, ಸಂಜು ಐಹೊಳ್ಳಿ, ಡಿ. ಎಲ್.ಚವ್ಹಾಣ್, ಬೀಮುಸಾಹುಕಾರ ಬಿರಾದಾರ, ಸಾಹೇಬಗೌಡ ಬಿರಾದಾರ, ಮಹಾದೇವ ಹಿರೇಕುರುಬರ, ಆರ್.ಡಿ.ಹಕ್ಕೆ, ಬಸುಸಾಹುಕಾರ ಬಿರಾದಾರ, ಸಂತೋಷಗೌಡ ಪಾಟೀಲ, ಕಲ್ಲಪ್ಪ ಉಟಗಿ, ಕಾಂತುಗೌಡ ಪಾಟೀಲ, ಹಣಮಂತ ಚಿಂಚಲಿ, ಶ್ರೀ ರೇವಣಸಿದ್ದೇಶ್ವರ ಜಾತ್ರಾ ಕಮೀಟಿ ಸದಸ್ಯರುಗಳು ಸೇರಿದಂತೆ ಗ್ರಾಪಂ ಸದಸ್ಯರುಗಳು, ಸುತ್ತ-ಮುತ್ತಲಿನ ಗ್ರಾಮಸ್ಥರು ಭಾಗವಹಿಸಿದ್ದರು.

ಕಾರ್ಯಕ್ರಮದ ಸ್ವಾಗತ ಗುರು ಜೇವೂರ, ನಿರೂಪಣೆ ಮುಕುಂದ ಅಡಕೆ ಹಾಗೂ ವಂದನಾರ್ಪಣೆಯನ್ನು ಕಾಮೇಶ ಪಾಟೀಲರು ನೆರವೇರಿಸಿದರು.

# 4ನೇ ದಿನಕ್ಕೆ ಅಂಬೇಡ್ಕರ ಸಂಘದ ಅಹೋರಾತ್ರಿ ಧರಣಿ ಸತ್ಯಾಗ್ರಹ

**ಉದಯರಶ್ಮಿ ನ್ಯೂಸ್**




ವಿಜಯಪುರ: ನಗರದ ಮನಗೂಳಿ ಅಗಸಿ ಹತ್ತಿರದ ಡಾ. ಬಿ.ಆರ್. ಅಂಬೇಡ್ಕರ ಸಮುದಾಯ ಭವನ ನಿರ್ಮಾಣಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಡಾ ಬಿ ಆರ್ ಅಂಬೇಡ್ಕರ್ ಯುವಕ ಸಂಘದಿಂದ ಹಮ್ಮಿಕೊಂಡಿರುವ ಅಹೋರಾತ್ರಿ ಧರಣಿ ಸತ್ಯಾಗ್ರಹ ನಾಲ್ಕನೇ ದಿನಕ್ಕೆ ಕಾಲಿಟ್ಟಿದೆ.

ನಾಲ್ಕನೇ ದಿನದ ಸತ್ಯಾಗ್ರಹದಲ್ಲಿ ಸಂಘಟನೆ ಹೋರಾಟಗಾರ ಬಸವರಾಜ ಕಾಂಬಳೆ ಅವರು ಮಾತನಾಡಿ, ಸಂವಿಧಾನ ಶಿಲ್ಪಿ ಭಾರತರತ್ನ ಡಾ ಬಿ ಆರ್ ಅಂಬೇಡ್ಕರ್ ಅವರ ಹೆಸರಿನಲ್ಲಿ ಮಂಜೂರಾದ ಸಮುದಾಯ ಭವನ ನಿರ್ಮಾಣ ಮಾಡದಂತೆ ಅಡ್ಡಿಪಡಿಸುವಂತಹ ಘಟನೆ ವಿಜಯಪುರ ಜಿಲ್ಲೆಯಲ್ಲಿ ನಡೆದಿರುವುದು ದುರಂತ. ಭವನಕ್ಕೆ ಅಡ್ಡಿಪಡಿಸಿ ಅಲ್ಲಿರುವ ಅಂಬೇಡ್ಕರ್ ಧ್ವಜವನ್ನು ತೆರವುಗೊಳಿಸುವ ಮೂಲಕ ಸಂವಿಧಾನ ಶಿಲ್ಪಿಗೆ ಅನ್ಯ ಕೋಮಿನ ಕೆಲವು ಜನ ಸಮಾಜದಲ್ಲಿ ಶಾಂತಿ ಸುವ್ಯವಸ್ಥೆ ಕಡಡಲು ಹುನ್ನಾರ ನಡೆಸಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದ ಅವರು ಜಿಲ್ಲಾಡಳಿತ ಈ ಘಟನೆಯನ್ನು ಗಂಭೀರ ಪ್ರಕರಣ ಎಂದು ಪರಿಗಣಿಸಿ ಇದಕ್ಕೆ ಕಾರಣರದವರ ಮೇಲೆ ಕಾನೂನು ಕ್ರಮ ಕೈಗೊಂಡು ಭವನ ನಿರ್ಮಾಣಕ್ಕೆ ಪೂರಕ ವಾತಾವರಣ ನಿರ್ಮಾಣ ಮಾಡಬೇಕೆಂದು ಅಗ್ರಹಿಸಿದರು.

ಈ ಸಂದರ್ಭದಲ್ಲಿ ಸಂಘಟನೆಯ ಅಧ್ಯಕ್ಷ ಶ್ರೀಶೈಲ ಕಾಖಂಡಕಿ ಕೀರ್ತಿ ಕಾಖಂಡಕಿ, ರಾಜು ಕಾಖಂಡಕಿ, ಶಿವಾನಂದ ಚಲವಾದಿ, ಪ್ರಕಾಶ ಚಲವಾದಿ, ರಾಮು ವಾಲಿಕಾರ ಮಲ್ಲಿಕಾರ್ಜುನ ಸಾವಳಗಿ, ಆಕಾಶ ಚಲವಾದಿ, ಶೇಖರ ಕೂಡಗಿ, ಮಂಜುನಾಥ ಕಾಖಂಡಕಿ, ಸಂಜು ಕಾಖಂಡಕಿ, ಸತೀಶ ಚಲವಾದಿ, ಚಿಕ್ಕಯ್ಯ ಚಲವಾದಿ, ಮಹೇಶ ಚಲವಾದಿ, ಉಮೇಶ ಚಲವಾದಿ, ಕುಮಾರ ಕಾಂಬಳೆ, ಮಧು ಕಾಖಂಡಕಿ, ಸವಿತಾ ಕಾಖಂಡಕಿ, ಸಂಗೀತಾ ಚಲವಾದಿ, ಗೀತಾ ಕೂಡಗಿ, ಲಲಿತಾ ವಾಲಿಕಾರ, ದುಂಡವ್ವ ಕಾಖಂಡಕಿ, ಮರಿಯಪ್ಪ ಖಿಜಾಪೂರ, ಚೇತನ ಜವಳಗಿ, ಸುನೀಲ ಕಾಖಂಡಕಿ, ಈಶ್ವರ ಕಾರಜೋಳ, ಭಾರತಿ ಕಾರಜೋಳ, ರಮಾ ಚಲವಾದಿ ಸತೀಶ ಕುಬಕಡ್ಡಿ, ಮಂಜುನಾಥ ಶಿವಶರಣ, ಉಮೇಶ ಕಾಂಬಳೆ, ರಾಕೇಶ ಕಾಖಂಡಕಿ, ಪ್ರದೀಪ ಚಲವಾದಿ, ಬಸವರಾಜ ಕುಬಕಡ್ಡಿ, ರಾಜು ವಾಲಿಕಾರ, ರಾಮಣ್ಣ ಕಾಖಂಡಕಿ, ರಮೇಶ ಕಾಖಂಡಕಿ, ಉಮೇಶ ಚಲವಾದಿ, ಕೃಷ್ಣಾ ಚಲವಾದಿ, ವಿಠ್ಠಲ ವಾಲೀಕಾರ, ಸತೀಶ ಚಲವಾದಿ, ಪ್ರತಾಪ ಚಿಕ್ಕಲಕಿ, ಆಕಾಶ ಕಾಂಬಳೆ, ರೋಹಿತ ಮಲಕಣ್ಣವರ ಸೇರಿದಂತೆ ಹಲವ-ರಿದ್ದರು.

# ಮೇ.26-27ರಂದು ಉಚಿತ ಸ್ಕ್ಯಾನಿಂಗ್-ಕೌನ್ಸೆಲಿಂಗ್

**ಉದಯರಶ್ಮಿ ನ್ಯೂಸ್**

ವಿಜಯಪುರ: ಬೇಬಿ ಸೈನ್ಸ್ ಐವಿಎಫ್ ಕ್ಲೀನಿಕ್‌ದಿಂದ ಉಚಿತ ಸಮಾಲೋಚನೆ, ಸ್ಕ್ಯಾನಿಂಗ್ ಮತ್ತು ಕೌನ್ಸೆಲಿಂಗ್ ಮೇ 26 ಹಾಗೂ 27 ರಂದು ಇಬ್ರಾಹಿಂಪೂರ ರೇಲ್ವೆ ಗೇಟ್ ಹತ್ತಿರದ ವೈಷ್ಣವಿ ಹೈಟ್ಸ್ ಬೇಬಿ ಸೈನ್ಸ್ ಐವಿಎಫ್ ಕ್ಲೀನಿಕ್‌ದಲ್ಲಿ ಆಯೋಜಿಸಲಾಗಿದೆ ಎಂದು ಬೇಬಿ ಸೈನ್ಸ್ ಐವಿಎಫ್ ಕ್ಲೀನಿಕ್ ಪ್ರಕಟಣೆಯಲ್ಲಿ ತಿಳಿಸಿದೆ.

ಬಂಜೆತನ ಎನ್ನುವುದು ಚಿಕಿತ್ಸೆ ನೀಡಬಹುದಾದ ಮತ್ತೊಂದು ವಿಧದ ವೈದ್ಯಕೀಯ ಸ್ಥಿತಿಯಾಗಿದೆ. ನಮ್ಮ ಬಂಜೆತನ ತಜ್ಞರೊಂದಿಗೆ ಉಚಿತ ಸಮಾಲೋಚನೆ ಬೇಬಿ ಸೈನ್ಸ್ ಐವಿಎಫ್ ಕ್ಲೀನಿಕ್‌ದ ನುರಿತ ತಜ್ಞರ ಸಲಹೆ ಪಡೆಯಲು ಈ ಬೇಬಿ ಸೈನ್ಸ್ ಐವಿಎಫ್ ಕ್ಲೀನಿಕ್‌ದಿಂದ ಉಚಿತ ಸಮಾಲೋಚನೆ, ಸ್ಕಾ[illegible]ನಿಂಗ್ ಮತ್ತು ಕೌನ್ಸೆಲಿಂಗ್ ಏರ್ಪಡಿಸಲಾಗಿದೆ.

ಡಾ. ಸಿ.ಎಸ್.ಮಂಜುನಾಥ್ ಹಾಗೂ ಡಾ. ಶಿವಕುಮಾರ ಪೂಜೇರಿ ಅವರು ಉಚಿತ ಸಮಾಲೋಚನೆ, ಸ್ಕ್ಯಾನಿಂಗ್ ಮತ್ತು ಕೌನ್ಸೆಲಿಂಗ್ ನಡೆಸಿಕೊಡಲಿದ್ದಾರೆ.

ಒಂದು ವರ್ಷಕ್ಕಿಂತ ಹೆಚ್ಚಿನ ಸಮಯದಿಂದ ಗರ್ಭ ಧರಿಸಲು ಪ್ರಯತ್ನಿಸುತ್ತಿದ್ದರೆ ಮತ್ತು ಎರಡನೇ ಮಗುವಿಗಾಗಿ ಪ್ರಯತ್ನಿಸುತ್ತಿದ್ದರೆ, ಅನೇಕ ಬಾರಿ ಗರ್ಭಪಾತವಾಗಿದ್ದರೆ, ಐಯುಐ ಅಥವಾ ಐವಿಎಫ್ ವೈಫಲ್ಯತೆ ಹೊಂದಿದ್ದರೆ, ಪಿಸಿಓಎಸ್ ಸಮಸ್ಯೆ, ಫೆಲೊಪಿಯನ್ ನಾಳದಲ್ಲಿ ಅಡಚಣೆ ಸೇರಿದಂತೆ ಅನೇಕ ಸಮಸ್ಯೆಗಳ ಪರಿಹಾರಕ್ಕಾಗಿ ಬೇಬಿ ಸೈನ್ಸ್ ಐವಿಎಫ್ ಕ್ಲೀನಿಕ್‌ದಿಂದ ಉಚಿತ ಸಮಾಲೋಚನೆ, ಸ್ಕ್ಯಾನಿಂಗ್ ಮತ್ತು ಕೌನ್ಸೆಲಿಂಗ್‌ದಿಂದ ಈ ಎರಡು ದಿನ 26, 27 ರಂದು ಬೆ.10 ಗಂಟೆಯಿಂದ ಸಂಜೆ 6.ಗಂಟೆಯುವರೆಗೆ ಹಮ್ಮಿಕೊಳ್ಳಲಾಗಿದೆ ಇದರ ಸದುಪಯೋಗ ಪಡೆದುಕೊಳ್ಳಲು ಬೇಬಿ ಸೈನ್ಸ್ ಐವಿಎಫ್ ಕ್ಲೀನಿಕ್ ಪ್ರಕಟಣೆಯಲ್ಲಿ ತಿಳಿಸಿದೆ.

# ಎಚ್.ಆಂಜನೇಯ ಗೆ ಎಂಎಲ್ಸಿ ಸ್ಥಾನ ನೀಡಲು ಮಾದಿಗರ ಸಂಘ ಆಗ್ರಹ

**ಉದಯರಶ್ಮಿ ನ್ಯೂಸ್**



ವಿಜಯಪುರ: ರಾಜ್ಯದಲ್ಲಿ ಜೂನ್ 17ರಂದು ನಿವೃತ್ತಿ ಹೊಂದಲಿರುವ 11 ಒಐಆ ಸ್ಥಾನಗಳಿಗೆ ಕಾಂಗ್ರೆಸ್ ಪಕ್ಷವು ಭರ್ತಿ ಮಾಡುತ್ತಿರುವ ಖಾಲಿ ಇರುವ ಸ್ಥಾನಕ್ಕೆ ನಾಡ ಕಂಡ ಅಪ್ರತಿಮ ನಾಯಕ ಶೋಷಿತರ ದಮನಿತರ ದಲಿತರ ಗಟ್ಟಿ- ಧ್ವನಿ ಎಚ್ ಆಂಜನೇಯ ಅವರಿಗೆ ವಿಧಾನ ಪರಿಷತ್ ಸ್ಥಾನ ನೀಡಬೇಕೆಂದು ಮಾದಿಗರ ಸಂಘ ಆಗ್ರಹಿಸಿತು.

ನಗರದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿದ ಕರ್ನಾಟಕ ಮಾದಿಗರ ಸಂಘದ ಜಿಲ್ಲಾ ಅಧ್ಯಕ್ಷ ಶ್ರೀಶೈಲ ರತ್ನಾಕರ್ ಹಾಗೂ ಮುಖಂಡರು ಮಾತನಾಡಿ, ಎಚ್ ಆಂಜನೇಯ ಸರ್ವಜನಾಂಗದ ನಾಯಕರು, ತಮ್ಮ ತಮ್ಮಅಧಿಕಾರಾವಧಿಯಲ್ಲಿ, ದೇವದಾಸಿ ತಾಯಂದಿರಿಗೆ ತಿಂಗಳ ಮಾಶಾಸನ, ದೇವದಾಸಿ ತಾಯಂದಿರ ಮಕ್ಕಳಿಗೆ ಮದುವೆಗೆ ಪ್ರೋತ್ಸಾಹ ಧನ, ಹೆಚಿನ ವಿದ್ಯಾಭ್ಯಾಸ ಮಾಡಲು ವಿದೇಶಕ್ಕೆ ಹೋಗಲು ಪ್ರೋತ್ಸಾಹ ನೀಡಲು ಯೋಜನೆ ಜಾ-ರಿಗೆ ತಂದವರು ಮತ್ತು ಮೊರಾರ್ಜಿ ದೇಸಾಯಿ ಶಾಲೆ, ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ, ಡಾ.ಬಿ.ಆರ್ ಅಂಬೇಡ್ಕರ್ ವಸತಿ ಶಾಲೆಗಳು, ಪ್ರತಿ ಗ್ರಾಮಗಳಲ್ಲಿ ಸಮುದಾಯ ಭವನಗಳು ನಿರ್ಮಾಣ, ಅಭಿವೃದ್ಧಿ ನಿಗಮಗಳಲ್ಲಿ ಸಾವಿರಾರು ಕೋಟಿ ಅನುದಾನ ನೀಡಿದ ಧೀಮಂತ ನಾಯಕರಾದ ಇವರನ್ನು ವಿಧಾನ ಪರಿಷತ್ ಸದಸ್ಯರನ್ನಾಗಿ ಆಯ್ಕೆ ಮಾಡಬೇಕೆಂದು ಆಗ್ರಹಿಸಿದರು.

ಈ ಸಮಯದಲ್ಲಿ ಮಹಾಂತೇಶ್ ಕಾಖಂಡಕಿ, ಮಲ್ಲು ಶೇಷಗೀರ್, ಧರ್ಮಣ್ಣ ಮಾದರ, ಸುನೀಲ ಸಂದ್ರಿಮನಿ(ಬಬಲೇಶ್ವರ),

ಸಿದ್ದು ಮಾದರ, ಸಿದ್ದು ಶೇಗುಣಸಿ,

ಸೋಮನಾಥ್ ದೊಡ್ಡಮನಿ, ವಿಜಯ್ ಮಾದರ, ಪ್ರಕಾಶ್ ದೊಡ್ಡಮನಿ (ಹು ಹಿಪ್ಪರಗಿ), ಪರಶುರಾಮ ದೋಡ್ಡಮನಿ, ಹಂಚಿನಾಳ ಪಿ ಎಚ್,

ರಘು ಬಲ್ಯಾಳ, ಕೊಲ್ಹಾರ ಯು ಕೆ ಪಿ, ಪರಶುರಾಮ ಕಟ್ಟಮನಿ, ಕೃಷ್ಣ ಕೆಂಗಲಗುತ್ತಿ, ದಸರಥ ಒಜ್ರಮಟ್ಟಿ, ರಾಣೇಶ ವಾಲಿಕಾರ(ಹಂಚಿನಾಳ)

ಮತ್ತು ದಲಿತ ಮುಖಂಡರು ಇದ್ದರು.


ಪ್ರಥಮ ಪುಣ್ಯಸ್ಮರಣೆ



ಜನನ : 11/08/1997 ಮರಣ : 25/05/2023

ದಿ.ವಿಜಯಕುಮಾರ ಟಿ ಮಲಗೊಂಡ

ಬದುಕಿನ ಸಾಧನೆಯ ಗುರಿ ತಲುಪುವ ಮುನ್ನವೇ ಬಾಡಿ, ಸವಿ ನೆನಪುಗಳನಷ್ಟೆ ನಮಗೆ ಬಿಟ್ಟು, ನಮ್ಮನ್ನಗಲಿದ ನಿಮ್ಮ ದಿವ್ಯಾತ್ಮಕ್ಕೆ ಹೃದಯಾಂತರಾಳದ ಕಂಬನಿ, ಸದಾ ಹುರುಪಿನಿಂದ ಕೂಡಿದ ಯುವ ಪತ್ರಕರ್ತ, ಭೇದಭಾವವಿಲ್ಲದೆ ಎಲ್ಲರೊಂದಿಗೆ ಬೆರೆತು ನಕ್ಷತ್ರದಂತೆ ಮಿಂಚಿ ಮರೆಯಾದ, ನೀವು ನಮ್ಮನ್ನಗಲಿ ಒಂದು ವರ್ಷ ಕಳೆದರೂ, ನಿಮ್ಮ ನೆನಪುಗಳು ನಮ್ಮಲ್ಲಿ ಪ್ರತಿ ದಿನ ಪ್ರತಿ ಕ್ಷಣ ಸದಾ ಹಸಿರು. ನಿಮ್ಮ ದಿವ್ಯಾತ್ಮಕ್ಕೆ ಚಿರಶಾಂತಿ ಕೋರುತ್ತ ನಿಮ್ಮ ಪುಣ್ಯ ಪವಿತ್ರ ಆತ್ಮಕ್ಕೆ ಪರಮಾತ್ಮನು ಚಿರಶಾಂತಿ ಕರುಣಿಸಲಿ.

ಪ್ರತಿ ದಿನ ಪ್ರತಿ ಕ್ಷಣ ನಿಮ್ಮ ಸ್ಮರಣೆಯಲ್ಲಿರುವ

ತಂದೆ: ಟಿ ಕೆ ಮಲಗೊಂಡ ತಾಯಿ : ಮಾದೇವಿ ಟಿ ಮಲಗೊಂಡ

ಪತ್ನಿ : ಶಿಲ್ಪಾ ವಿ ಮಲಗೊಂಡ ಮಗಳು : ಲಕ್ಷ್ಮೀ ವಿಜಯಕುಮಾರ ಮಲಗೊಂಡ

ಸಹೋದರಿ : ವಿಜಯಲಕ್ಷ್ಮಿ ಎಮ್ ಅಖಂಡಪ್ಪಗೋಳ ಸಹೋದರ : ವಿಶ್ವಪ್ರಕಾಶ ಟಿ ಮಲಗೊಂಡ

ಮಲಗೊಂಡ, ಏಳಗಿ, ರಾಂಪೂರೆ, ಬಿರಾದಾರ, ಪಾಟೀಲ, ಕೊಪ್ಪದ, ಅಖಂಡಪ್ಪಗೋಳ, ಹಲಸಿ, ಒಂಟೆ, ಹಾಗೂ ಅಪರಾಧಕ್ಕೆ ಸವಾಲು ಕನ್ನಡ ದಿನಪತ್ರಿಕೆ ಬಳಗ ಹಾಗೂ ಗುಂದಗಿ ಗ್ರಾಮದ ಅಪಾರ ಬಂಧು ಬಳಗ ಆಪ್ತ ಮಿತ್ರರು.







**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR